# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 124 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 28–11–2023 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 Issue - 124 | Title- Code: KARKAN 28269 | Chitradurga | Date: 28-11-2023 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಮುಖ್ಯಮಂತ್ರಿಗಳ ಜನತಾ ದರ್ಶನ: ಜನರ ಸಮಸ್ಯೆಗಳಿಗೆ ಪರಿಹಾರ 2
ಲೋಕಸಭೆಗೆ ಅವಕಾಶಕೊಟ್ಟರೆ ಕಾಂಗ್ರೆಸ್‌ಗೆ ಗೆಲುವಿನ ಉಡುಗೊರೆ 3
ಕವಾಡಿಗರಹಟ್ಟಿ ಸರ್ಕಾರಿ ಶಾಲೆ ಗೋಡೆಗಳ ಮೇಲೆ ಅರಳಿರುವ ಬಣ್ಣದ ಬಣ್ಣದ ಚಿತ್ರಗಳು 4



ಸುದ್ದಿ, ಜಾಹಿರಾತಿಗೆ 9686622252


### ಸಚಿವ ಡಿ.ಸುಧಾಕರ್ ಅವರಿಂದ ಧರ್ಮಪುರದಲ್ಲಿ ಜಿಲ್ಲಾಮಟ್ಟದ ಜನತಾ ದರ್ಶನ

# ಅನ್ನಭಾಗ್ಯ: ಹಣದ ಬದಲು ಶೀಘ್ರ ಅಕ್ಕಿ ವಿತರಣೆ

» ಚಿತ್ರದುರ್ಗ

ಸರ್ಕಾರದ ಪ್ರಮುಖ ಯೋಜನೆಯಾಗಿರುವ ಅನ್ನಭಾಗ್ಯ ಯೋಜನೆಯಡಿ ಪ್ರಸ್ತುತ ಪ್ರತಿ ಫಲಾನುಭವಿಗೆ 05 ಕೆ.ಜಿ. ಅಕ್ಕಿ ಹಾಗೂ ಉಳಿದಂತೆ 05 ಕೆ.ಜಿ. ಅಕ್ಕಿಯ ಬದಲಿಗೆ ಅಕ್ಕಿಯ ಮೊತ್ತಕ್ಕೆ ಹಣ ಪಾವತಿಸಲಾಗುತ್ತಿದ್ದು, ಶೀಘ್ರವೇ ಹಣದ ಬದಲಿಗೆ ಪೂರ್ಣ ಪ್ರಮಾಣದಲ್ಲಿ ಅಕ್ಕಿಯನ್ನೇ ನೀಡಲಾಗುವುದು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ಹೇಳಿದರು.

ಹಿರಿಯೂರು ತಾಲ್ಲೂಕಿನ ಧರ್ಮಪುರದ ವಾಸವಿ ಕಲ್ಯಾಣ ಮಂಟಪದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಹಿರಿಯೂರು ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ಧರ್ಮಪುರ ಗ್ರಾಮ ಪಂಚಾಯಿತಿ ವತಿಯಿಂದ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಆಡಳಿತ ಚುರುಕುಗೊಳಿಸುವ ಜತೆಗೆ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳನ್ನು ತಲುಪಿಸುವ ನಿಟ್ಟಿನಲ್ಲಿ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಮುಖ್ಯಮಂತ್ರಿಗಳ ನೆಚ್ಚಿನ ಜನತಾ ದರ್ಶನ ಕಾರ್ಯಕ್ರಮವು ಅತ್ಯುತ್ತಮ ಹಾಗೂ ಯಶಸ್ವಿಯತ್ತ ಸಾಗುತ್ತಿದೆ. ಜನತಾ ದರ್ಶನ ಕಾರ್ಯಕ್ರಮದಲ್ಲಿ ಜನರ ಅಹವಾಲು ಆಲಿಸಿ ಸಮಸ್ಯೆಗಳಿಗೆ ಪರಿಹಾರೋಪಾಯ ಒದಗಿಸಲಾಗುತ್ತಿದೆ. ಜನರ ಮನೆಬಾಗಿಲಿಗೆ ಸರ್ಕಾರದ ಯೋಜನೆ ತಲುಪಿಸುವ ಕೆಲಸ ಮಾಡಲಾಗುತ್ತಿದೆ ಎಂದರು.

ಬಡವರಿಗೆ ಅನ್ನವನ್ನು ನೀಡುವ ಅನ್ನಭಾಗ್ಯ ಯೋಜನೆಯಡಿ ಪ್ರಸ್ತುತ ಪ್ರತಿ ಫಲಾನುಭವಿಗೆ ಪ್ರತಿ ತಿಂಗಳು 05 ಕೆ.ಜಿ. ಅಕ್ಕಿಯನ್ನು ನೀಡಿ, ಉಳಿದ 05 ಕೆ.ಜಿ. ಅಕ್ಕಿಯ ಮೊತ್ತ ರೂ. 170 ಗಳನ್ನು ಫಲಾನುಭವಿಯ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುತ್ತಿದೆ. ಶೀಘ್ರವೇ ಒಂದೆರಡು ತಿಂಗಳಿನಲ್ಲಿ ಫಲಾನುಭವಿಗೆ ಹಣದ ಬದಲಿಗೆ ಪೂರ್ಣ ಪ್ರಮಾಣದಲ್ಲಿ ಅಕ್ಕಿಯನ್ನೇ ನೀಡಲಾಗುವುದು ಎಂದರು.





## ಸೌಲಭ್ಯಗಳ ವಿತರಣೆ

ಜಿಲ್ಲಾಮಟ್ಟದ ಜನತಾ ದರ್ಶನ ಕಾರ್ಯಕ್ರಮದ ಅಂಗವಾಗಿ ಫಲಾನುಭವಿಗಳಿಗೆ ಸರ್ಕಾರದ ವಿವಿಧ ಯೋಜನೆಗಳಡಿ ಸೌಲಭ್ಯ ವಿತರಿಸಲಾಯಿತು. 20 ಜನರಿಗೆ ಸಂಧ್ಯಾ ಸುರಕ್ಷಾ, 10 ಜನರಿಗೆ ವಿಧವಾ ವೇತನ, 10 ಜನರಿಗೆ ಇಂದಿರಾಗಾಂಧಿ ವೃದ್ಧಾಪ್ಯ ವೇತನ, ಮೂವರಿಗೆ ರಾಷ್ಟ್ರೀಯ ಕುಟುಂಬ ಸಹಾಯಧನ, 94ಸಿ ಯೋಜನೆಯಡಿ ಮೂವರಿಗೆ ಮನೆ ನಿವೇಶನ ಹಕ್ಕು ಪತ್ರ ವಿತರಣೆ, ಪಶುಪಾಲನಾ ಇಲಾಖೆಯಿಂದ ಹಾಗೂ ಕೃಷಿ ಇಲಾಖೆಯಿಂದ ರೈತರಿಗೆ ತಲಾ 10 ಮೇವಿನ ಬೀಜದ ಕಿಟ್ ವಿತರಣೆ, 15 ಜನ ಫಲಾನುಭವಿಗಳಿಗೆ ಬಸವ ವಸತಿ ಯೋಜನೆಯಡಿ ಸಹಾಯಧನ ಚೆಕ್‌ಗಳ ವಿತರಣೆ, 10 ಜನರಿಗೆ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ವೈಯಕ್ತಿಕ ಶೌಚಾಲಯದ ಕಾರ್ಯಾದೇಶ, 30 ಜನರಿಗೆ ಕೃಷಿ ಇಲಾಖೆಯಿಂದ ಸ್ಪ್ರಿಂಕ್ಲರ್ ಸೆಟ್ ವಿತರಣೆ, ನಾಲ್ವರಿಗೆ ಪಿಎಂಕೆಎಸ್‌ವೈಡಬ್ಲ್ಯು ಡಿ.ಸಿ.2.0 ಯೋಜನೆಯಡಿ ಪರಿಕರಗಳ ವಿತರಣೆ ಮಾಡಲಾಯಿತು.

ಸರ್ಕಾರದ ವಿವಿಧ ಇಲಾಖೆಗಳಿಗೆ ಜನರ ಅಲೆದಾಟ ತಪ್ಪಿಸಲು, ತ್ವರಿತಗತಿಯಲ್ಲಿ ಜನರ ಸಮಸ್ಯೆ ಬಗೆಹರಿಸಬೇಕೆಂಬುದು ಜನತಾ ದರ್ಶನ ಕಾರ್ಯಕ್ರಮದ ಆಶಯವಾಗಿದೆ. ಬರಗಾಲದ ಹಿನ್ನಲೆಯಲ್ಲಿ ಎಲ್ಲಾ ಮುಂಜಾಗ್ರತಾ ಕ್ರಮವಾಗಿ ಜನರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಹಾಗೂ ಜಾನುವಾರುಗಳಿಗೆ ಮೇವು ಹಾಗೂ ನೀರಿನ ತೊಂದರೆಯಾಗದಂತೆ ಕ್ರಮವಹಿಸಲಾಗಿದ್ದು, ಬರ ಎದುರಿಸಲು ಬರಪರಿಹಾರ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗ್ರಾಮಸಭೆ ಮಾಡುವ ಮೂಲಕ ಜನರ ಸಮಸ್ಯೆ ಬಗೆಹರಿಸಲು ಕ್ರಮವಹಿಸಲಾಗುವುದು ಎಂದರು. ಸರ್ಕಾರ ನೀಡಿರುವ ಭರವಸೆಯಂತೆ 5 ಗ್ಯಾರಂಟಿಗಳಲ್ಲಿ ಈಗಾಗಲೇ ನಾಲ್ಕು ಗ್ಯಾರಂಟಿಗಳನ್ನು ಈಡೇರಿಸಲಾಗಿದೆ. ಉಳಿದಂತೆ ಯುವನಿಧಿ ಯೋಜನೆಯನ್ನು ಜನವರಿ ಮಾಹೆಯಲ್ಲಿ ಅನುಷ್ಠಾನಗೊಳಿಸಲಾಗುವುದು ಎಂದರು. ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮಾತನಾಡಿ, ಜನಸಾಮಾನ್ಯರಿಗೆ ಉಪಯೋಗವಾಗುವಂತಹಯೋಜನೆಗಳನ್ನು ಸರ್ಕಾರ ಅನುಷ್ಠಾನಕ್ಕೆ ತಂದಿದೆ. ಸರ್ಕಾರದ ವಿವಿಧ ಯೋಜನೆಗಳ ಜತೆಗೆ ಜನಸಾಮಾನ್ಯರ ಕುಂದುಕೊರತೆ ಆಲಿಸಲು, ಅಲೆದಾಟ ತಪ್ಪಿಸಲು ಮನೆ ಬಾಗಿಲಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸುವ ನಿಟ್ಟಿನಲ್ಲಿ ಸರ್ಕಾರ ದಿಟ್ಟ ಹೆಜ್ಜೆ ಇಟ್ಟಿದೆ. ಜಿಲ್ಲಾಮಟ್ಟದ ಜನತಾ ದರ್ಶನ ಕಾರ್ಯಕ್ರಮವನ್ನು ಗ್ರಾಮಮಟ್ಟದಲ್ಲಿ ನಡೆಸಬೇಕು ಎಂಬ ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆ ಮೇರೆಗೆ ಧರ್ಮಪುರ ಗ್ರಾಮದಲ್ಲಿ ಜನತಾ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದರು.

ಸರ್ಕಾರ ವಿವಿಧ ಇಲಾಖೆಗಳಲ್ಲಿ ಗುರಿಯೊಂದಿಗೆ ಪ್ರಗತಿ ಸಾಧಿಸಲಾಗುತ್ತಿದೆ. ಕಂದಾಯ ಇಲಾಖೆಗೆ ಸಂಬಂಧಪಟ್ಟಂತೆ ಡಿಸೆಂಬರ್ ಅಂತ್ಯದೊಳಗೆ ಕಂದಾಯ ಗ್ರಾಮಗಳ ರಚನೆ ಮಾಡಬೇಕು ಎಂಬ ನಿರ್ದೇಶನ ನೀಡಲಾಗಿದೆ. ಈಗಾಗಲೇ ಪ್ರಾಥಮಿಕಅಧಿಸೂಚನೆ, ಅಂತಿಮಅಧಿಸೂಚನೆ ಹೊರಡಿಸಿದ್ದು, ಡಿಸೆಂಬರ್ ಅಂತ್ಯದೊಳಗೆ ಎಲ್ಲಾ ಅರ್ಹ ಜನವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳನ್ನಾಗಿ ರಚನೆ ಮಾಡಲಾಗುವುದು ಎಂದರು. ಸಾಮಾಜಿಕ ಭದ್ರತಾ ಯೋಜನೆಯಡಿ ಪಿಂಚಣಿ ಪಡೆಯುವ ಎಲ್ಲಾ ಫಲಾನುಭವಿಗಳಿಗೆ ಎನ್‌ಪಿಸಿ ಮ್ಯಾಪಿಂಗ್ ಹಾಗೂ ಆಧಾರ್ ಜೋಡಣೆಯನ್ನು ಶೇ.100ರಷ್ಟು ಪ್ರಗತಿ ಸಾಧಿಸಲಾಗಿದೆ. ಪೋಡಿಮುಕ್ತ ಅಭಿಯಾನ ಮಾಡಲು ಈಗಾಗಲೇ ಗುರಿ ನಿಗಧಿಪಡಿಸಲಾಗಿದ್ದು, ಪ್ರಗತಿ ಸಾಧಿಸಲಾಗುತ್ತಿದೆ. ಜನಸಾಮಾನ್ಯರ ಮನೆ ಬಾಗಿಲಿಗೆ ಹೋಗಿ ನಿಗದಿತ ಸಮಯದಲ್ಲಿ ಪರಿಹಾರ ಒದಗಿಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ ಒಟ್ಟು 4 ಕಡೆ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಜನತಾ ದರ್ಶನ ಕಾರ್ಯಕ್ರಮದಲ್ಲಿ 871 ಅರ್ಜಿಗಳು ಸ್ವೀಕೃತಗೊಂಡಿವೆ. ಈಗಾಗಲೆ 721 ಅರ್ಜಿಗಳನ್ನು ವಿಲೇ ಮಾಡಲಾಗಿದ್ದು, ಇನ್ನು 150 ಅರ್ಜಿಗಳು ಮಾತ್ರ ವಿಲೇಗೆ ಬಾಕಿ ಇವೆ. ಜನಸಾಮಾನ್ಯರು ಸಲ್ಲಿಸುವ ಎಲ್ಲಾ ಅರ್ಜಿಗಳು ಗಣಕೀಕೃತವಾಗುತ್ತಿವೆ. ಜನತಾ ದರ್ಶನ ಕಾರ್ಯಕ್ರಮವನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ಜನರ ಸಮಸ್ಯೆಗಳಿಗೆ ಪರಿಹಾರ ಒದಗಿಸುತ್ತಿದ್ದಾರೆ ಎಂದರು.

ಹಿರಿಯೂರು ತಹಶೀಲ್ದಾರ್ ರಾಜೇಶ್ ಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಧರ್ಮಪುರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಜ್ಯೋತಿ ಹನುಮಂತರಾಯಪ್ಪ, ಉಪಾಧ್ಯಕ್ಷೆ ಲಕ್ಷ್ಮೀದೇವಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕ ಡಾ.ರಂಗಸ್ವಾಮಿ, ತಹಸಿಲ್ದಾರ್ ರಾಜೇಶ್, ತಾಲ್ಲೂಕು ಪಂಚಾಯಿತಿ ಇಒ ಸತೀಶ್ ಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಂ. ತಿಪ್ಪೇಸ್ವಾಮಿ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

ಧರ್ಮಪುರದ ಶಾಲಾ ವಿದ್ಯಾರ್ಥಿಗಳು ಇದೇ ಸಂದರ್ಭದಲ್ಲಿ ಕೋಲಾಟ ಸಾಂಸ್ಕೃತಿಕ ಕಾರ್ಯಕ್ರಮ ಪ್ರಸ್ತುತಪಡಿಸಿದರು.

ಧರ್ಮಪುರದ ವಾಸವಿ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಿದ ಜಿಲ್ಲಾ ಮಟ್ಟದ ಜನತಾದರ್ಶನ ಕಾರ್ಯಕ್ರಮದ ಅಂಗವಾಗಿ ಸಾರ್ವಜನಿಕರು ತಮ್ಮ ಕುಂದುಕೊರತೆಗಳಿಗೆ ಸಂಬಂಧಿಸಿದ ಅಹವಾಲುಗಳನ್ನು ಸಲ್ಲಿಸಲು ಕೌಂಟರ್‌ಗಳನ್ನು ತೆರೆದು, ಸಾರ್ವಜನಿಕರಿಂದ ಅರ್ಜಿಗಳನ್ನು ಸ್ವೀಕರಿಸಲು ಸಮರ್ಪಕ ವ್ಯವಸ್ಥೆ ಮಾಡಲಾಗಿತ್ತು.

### ಜನಸ್ಪಂದನ ಕಾರ್ಯಕ್ರಮ

# ಸಮಸ್ಯೆಗಳ ಪರಿಹಾರಕ್ಕೆ ಸಿಎಂ 15 ದಿನ ಗಡುವು



» ಬೆಂಗಳೂರು

ಮುಖ್ಯಮಂತ್ರಿಯವರ ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಜನಸ್ಪಂದನ ಕಾರ್ಯಕ್ರಮಕ್ಕೆ ಜನರಿಂದ ಉತ್ತಮ ಸ್ಪಂದನೆ ದೊರೆತಿದ್ದು, 3500 ಕ್ಕೂ ಹೆಚ್ಚು ಅರ್ಜಿಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಖುದ್ದು ಸ್ವೀಕರಿಸಿ, ಪರಿಹಾರಕ್ಕೆ ಕ್ರಮಕೈಗೊಳ್ಳಲು ಅಧಿಕಾರಿಗಳಿಗೆ ತಿಳಿಸಿರುತ್ತಾರೆ. ಬೆಳಿಗ್ಗೆ 10.00 ಗಂಟೆಗೆ ಆರಂಭಗೊಂಡು, ಜನಸ್ಪಂದನ ಕಾರ್ಯಕ್ರಮವು ಜನರ ಸಮಸ್ಯೆಯ ಪರಿಹಾರಕ್ಕೆ ಉತ್ತಮ ವೇದಿಕೆ ಆಯಿತು.

ಮಧ್ಯಾಹ್ನದ ಊಟದ ಬಿಡುವಿನಲ್ಲಿ ಊಟಕ್ಕೆಂದು ಮನೆಗೆ ತೆರಳಲು ಎದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಬಳಿಕ ಅಹವಾಲು ಬಂದಿರುವವರ ಸಂಖ್ಯೆ ಇನ್ನೂ ಬಹಳಷ್ಟಿದೆ ಎಂದು ಮಾಹಿತಿ ಲಭ್ಯವಾದ ಕೂಡಲೇ ಅಹವಾಲು ಸ್ವೀಕರಿಸುವ ಟೇಬಲ್ಲಿಗೇ ಊಟ ತರಿಸಿಕೊಂಡು ಅಲ್ಲೇ ಕುಳಿತು ಊಟ ಸೇವಿಸಿದರು.

ಪುಟ ↘ 2




## ಫಾಸ್ಟ್ ನ್ಯೂಸ್

### ನ.30ರಂದು ಕನಕದಾಸರ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಇದೇ ನವೆಂಬರ್ 30ರಂದು ಮಧ್ಯಾಹ್ನ 1ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ಸಂತಶ್ರೇಷ್ಠ ಭಕ್ತ ಕನಕದಾಸರ ಜಯಂತಿ ಆಚರಣೆ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಘನ ಉಪಸ್ಥಿತಿವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ವಿಶೇಷ ಆಹ್ವಾನಿತರಾಗಿ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ ಭಾಷಾ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಎನ್.ವೈ.ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಎಸ್.ಶ್ರೀರಾಮ್, ಕಾರ್ಯದರ್ಶಿ ಬಿ.ಟಿ.ಜಗದೀಶ್ ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಚುನಾಯಿತ ನಗರಸಭಾ ಸದಸ್ಯರು ಮತ್ತು ಜಿಲ್ಲೆಯ ಕುರುಬ ಸಮಾಜದ ಮುಖಂಡರು ಹಾಗೂ ಗಣ್ಯರು ಭಾಗವಹಿಸುವರು. ಅಕ್ಕಮಹಾದೇವಿ ವಿಶ್ವವಿದ್ಯಾನಿಲಯ ವಿಶ್ರಾಂತ ಕುಲಪತಿ ಸುನಂದಮ್ಮ ಉಪನ್ಯಾಸ ನೀಡುವರು. ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಕುರುಬ ಸಮಾಜದ ಗಣ್ಯರಿಗೆ ಹಾಗೂ ಸಹೋದರ ಸಮಾಜದ ಸಾಧನೆ ಮಾಡಿದ ಗಣ್ಯರಿಗೆ ಜಿಲ್ಲಾ ಕುರುಬ ಸಮಾಜದ ವತಿಯಿಂದ ಗೌರವ ಸನ್ಮಾನ ಮಾಡಲಾಗುವುದು. ಚಿತ್ರದುರ್ಗ ತಾಲ್ಲೂಕಿನ ಆಯಿತೋಳಿನ ವಿರೂಪಾಕ್ಷಪ್ಪ ಮತ್ತು ತಂಡದವರಿಂದ ಗೀತಗಾಯನ ನಡೆಯಲಿದೆ. ಜಯಂತಿ ಅಂಗವಾಗಿ ಅಂದು ಬೆಳಿಗ್ಗೆ 9.30ಕ್ಕೆ ನಗರದ ಹೊಳಲ್ಕೆರೆ ರಸ್ತೆಯ ಕನಕವೃತ್ತದಿಂದ ಸಂಗೊಳ್ಳಿರಾಯಣ್ಣ ವೃತ್ತ, ಗಾಂಧಿ ವೃತ್ತ, ಎಸ್‌ಬಿಎಂ ವೃತ್ತ, ಓನಕೆ ಓಬವ್ವ ವೃತ್ತ, ಅಂಬೇಡ್ಕರ್ ವೃತ್ತ, ಮದಕರಿನಾಯಕ ವೃತ್ತದ ಮೂಲಕ ತರಾಸು ರಂಗಮಂದಿರದವರೆಗೆ ವಿವಿಧ ಜಾನಪದ ಕಲಾತಂಡಗಳೊಂದಿಗೆ ಮೆರವಣಿಗೆ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

### ಇಬ್ಬರು ಬಾಲ ಕಾರ್ಮಿಕರ ರಕ್ಷಣೆ

» ಚಿತ್ರದುರ್ಗ

ಬಾಲ್ಯವಾಸ್ಥೆ ಹಾಗೂ ಕಿಶೋರವಾಸ್ಥೆ ಕಾರ್ಮಿಕ ನಿಷೇಧ ಕಾಯ್ದೆ-1986ರ ಅಡಿ ಹೊಳಲ್ಕೆರೆ ನಗರದ ಬೇಕರಿ ಹಾಗೂ ತಾಲ್ಲೂಕಿನ ರಾಮಗಿರಿ ಗ್ರಾಮದ ಹೋಟೆಲ್‌ನಲ್ಲಿ ಕೆಲಸ ನಿರ್ವಹಿಸುತ್ತಿದ್ದ ಬಾಲ ಕಾರ್ಮಿಕರನ್ನು ಅಧಿಕಾರಿಗಳು ರಕ್ಷಿಸಿದ್ದಾರೆ. ಬಾಲಕರನ್ನು ಕೆಲಸದಿಂದ ಬಿಡುಗಡೆಗೊಳಿಸಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರು ಪಡಿಸಲಾಗಿದೆ. ಬಾಲಕಾರ್ಮಿಕರನ್ನು ಕೆಲಸಕ್ಕೆ ಸೇರಿಸಿಕೊಳ್ಳದಂತೆ ಮಾಲೀಕರಿಗೆ ಜಾಗೃತಿ ಮೂಡಿಸಲಾಯಿತು. ಕಾರ್ಯಾಚರಣೆಯಲ್ಲಿ ಹೊಸದುರ್ಗ ಪ್ರಭಾರ ಕಾರ್ಮಿಕ ನಿರೀಕ್ಷಕ ಡಿ.ರಾಜಣ್ಣ, ಬಾಲಕಾರ್ಮಿಕಬ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್ ಹಾಗೂ ಸಹಾಯಕ ಶಿಶು ಅಭಿವೃದ್ಧಿ ಯೋಜನಾ ಅಧಿಕಾರಿ ದಾಸಪ್ಪ ಹಾಗೂ ಜಿಲ್ಲಾ ಮಕ್ಕಳ ಘಟಕದ ಸ್ವಾಮಿ, ಪೊಲೀಸ್ ಶಿವಲಿಂಗಪ್ಪ ಭಾಗವಹಿಸಿದ್ದರು.

### ಆರೋಗ್ಯ ತಪಾಸಣೆ




» ನಾಯಕನಹಟ್ಟಿ

ನೊಂದಾಯಿತ ಕಟ್ಟಡ ಕಾರ್ಮಿಕರು, ಕಾರ್ಮಿಕ ಕಾರ್ಡ್ ಹೊಂದಿರುವವರಿಗೆ ಆರೋಗ್ಯ ತಪಾಸಣೆ ಮಾಡಲಾಗುತ್ತದೆ ಎಂದು ನಾಯಕನಹಟ್ಟಿ ಹೋಬಳಿಯ ಕಟ್ಟಡ ಕಾರ್ಮಿಕರ ಸಂಘದ ಹೋಬಳಿ ಅಧ್ಯಕ್ಷರಾದ ತಿಪ್ಪೇಸ್ವಾಮಿ ತಿಳಿಸಿದರು. ಪಟ್ಟಣದ ಹೊರಮಠದಲ್ಲಿ ಕರ್ನಾಟಕ ಸರ್ಕಾರ, ಕಾರ್ಮಿಕರ ಇಲಾಖೆ, ಕರ್ನಾಟಕ ಕಟ್ಟಡ ಮತ್ತು ಇತರೆ ಕಾರ್ಮಿಕರ ಮತ್ತು ಅವರ ಅವಲಂಬಿತರಿಗೆ ಉಚಿತ ಆರೋಗ್ಯ ಶಿಬಿರದಲ್ಲಿ ಮಾತನಾಡಿದರು. ನಂತರ ಮಾತನಾಡಿದ ಅವರು ಕಟ್ಟಡ ಕಾರ್ಮಿಕರು ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಮನವಿ ಮಾಡಿಕೊಂಡರು. ನೊಂದಾಯಿತ ಕಟ್ಟಡ ಕಾರ್ಮಿಕರನ್ನು ಆರೋಗ್ಯದಿಂದ ರಕ್ಷಿಸುವುದರ ಮೂಲಕ ಭವಿಷ್ಯ ಅನೇಕ ಖಾಯಿಲೆಯಿಂದ ರಕ್ಷಿಸುತ್ತದೆ. ಹೀಗಾಗಿ ಶಿಬಿರದಲ್ಲಿ ಭಾಗವಹಿಸಿ ಎಂದು ಹೇಳಿದರು. ಈ ಸಂದರ್ಭದಲ್ಲಿ ಉಪಸ್ಥಿತರಾದ ನಾಯಕನಹಟ್ಟಿ ಹೋಬಳಿಯ ಕಾರ್ಮಿಕರ ಕಟ್ಟಡ ಸಂಘದ ಅಧ್ಯಕ್ಷರಾದ ತಿಪ್ಪೇಸ್ವಾಮಿ, ಉಪಾಧ್ಯಕ್ಷರಾದ ಎಂ.ಸಿ. ತಿಪ್ಪೇಸ್ವಾಮಿ, ಸೈಯದ್ ದಾದಾಪೀರ್, ಅಬ್ಜಲ್, ವೈದ್ಯಾಧಿಕಾರಿಗಳಾದ ಡಾ॥ ಅಸಾದ್ ಪಟಾಣ್, ಡಾ॥ ಸಂಜಯ್, ಡಾ॥ ಪ್ರಭಾ, ಮಾಲ, ಸಾವಿತ್ರಿ, ನರ್ಸಿಂಗ್ ಆಫೀಸರ್ ಹರೀಶ್, ಅರ್ಚನ ಹಾಗೂ ಇನ್ನಿತರರು ಇದ್ದರು.

# ಒಳ ಮೀಸಲಾತಿ ಮಸೂದೆ ಮಂಡಿಸಿ

» ಚಿತ್ರದುರ್ಗ

ಈ ಬಾರಿಯ ಬೆಳಗಾವಿಯಲ್ಲಿ ನಡೆಯಲಿರುವ ಚಳಿಗಾಲದ ಅಧಿವೇಶನದಲ್ಲಿ ಒಳ ಮೀಸಲಾತಿ ಮಸೂದೆಯನ್ನು ಮಂಡಿಸಿ ಚರ್ಚೆ ಮಾಡಿ ಅದರ ಬಗ್ಗೆ ಸೂಕ್ತವಾದ ಕ್ರಮ ಜರುಗಿಸಬೇಕು, ಒಳಮೀಸಲಾತಿಯ ಕುರಿತು ಸಕಾರಾತ್ಮಕವಾದಂತ ತೀರ್ಮಾನ ತೆಗೆದುಕೊಳ್ಳದಿದ್ದರೆ ಅಧಿವೇಶನ ಮುಗಿದ ನಂತರ ಇಡೀ ಕರ್ನಾಟಕ ರಾಜ್ಯಾದ್ಯಂತ ಕಾಂಗ್ರೆಸ್ ವಿರುದ್ಧವಾಗಿ ಅಭಿಯಾನವನ್ನು ಶುರು ಮಾಡಿ ಮುಂದಿನ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠವನ್ನು ಕಲಿಸಲಾಗುವುದು ಎಂದು ಸರ್ಕಾರಕ್ಕೆ ಮೀಸಲಾತಿ ಜಾಗೃತಿ ಸಮಿತಿ ಎಚ್ಚರಿಕೆಯನ್ನು ನೀಡಿದೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಹೈಕೋರ್ಟ್ ನ್ಯಾಯವಾದಿಗಳು, ಬಿಎಸ್.ಪಿ.ಯ ರಾಜ್ಯಾಧ್ಯಕ್ಷರಾದ ಎ.ಹರಿರಾಮ್ ಕಳೆದ ಮೂರು ದಶಕಗಳಿಂದ ಕರ್ನಾಟಕ ರಾಜ್ಯದಲ್ಲಿ ಒಳ ಮೀಸಲಾತಿಯ ಕುರಿತು ದೊಡ್ಡ ಚಳುವಳಿ ಮತ್ತು ಹೋರಾಟಗಳು ನಡೆದಿದೆ. ಈ ಹೋರಾಟದ ಪ್ರತಿಫಲವಾಗಿ ಕರ್ನಾಟಕ ರಾಜ್ಯದಲ್ಲಿ 2005ರಲ್ಲಿ ಸರ್ಕಾರವು ಸದಾಶಿವ ಆಯೋಗವನ್ನು ರಚಿಸಿತು. ಆಯೋಗವು ಇಡೀ ಕರ್ನಾಟಕ ರಾಜ್ಯದ ಉದ್ದಗಲಕ್ಕೂ ಸಂಚರಿಸಿ, ರಾಜ್ಯದ ವಿವಿದ ಸಂಘಟನೆಗಳ ನಾಯಕರೊಂದಿಗೆ ಚರ್ಚಿಸಿ, ಮನೆ ಮನೆಗೂ ಬೇಟಿ ನೀಡಿ, ಮಾಹಿತಿಗಳನ್ನು ಸಂಗ್ರಹಿಸಿ, 101 ಜಾತಿಗಳನ್ನು ಅಧ್ಯಯನ ಮಾಡಿ ಅವರ ಸಾಮಾಜಿಕ ಶೈಕ್ಷಣಿಕ ಆರ್ಥಿಕ ಮತ್ತು ರಾಜಕೀಯ ಸ್ಥಾನಮಾನಗಳನ್ನು ವರದಿಯಲ್ಲಿ ಅಳವಡಿಸಿ, ಕೂಲಂಕುಶ ಅಧ್ಯಯನದ ನಂತರ ರಾಜ್ಯ ಸರ್ಕಾರಕ್ಕೆ ತನ್ನ ವರದಿಯನ್ನು ಒಪ್ಪಿಸಿದೆ.



ಆದರೆ ತದನಂತರ ಆ ವರದಿಯನ್ನು ವಿಧಾನಸಭೆಯಲ್ಲಿ ಮಂಡಿಸುವುದಾಗಲಿ ಚರ್ಚಿಸುವುದಾಗಲಿ ಅಥವಾ ಅದನ್ನು ಜಾರಿ ಮಾಡುವ ಬಗ್ಗೆ ಆಗಲಿ ಯಾವುದೇ ಸರ್ಕಾರ ತೀರ್ಮಾನಗಳನ್ನು ತೆಗೆದುಕೊಳ್ಳಲಿಲ್ಲ. ಇದರಿಂದ ಮತ್ತೆ ರಾಜ್ಯಾದ್ಯಂತ ಒಳಮಿಸಲಾತಿಯ ಪರ ಹೋರಾಟಗಳು ತೀವ್ರಗೊಳ್ಳುತ್ತಿದ್ದಂತೆ, ತಮ್ಮ ನಾಲ್ಕು ವರ್ಷಗಳ ಅಧಿಕಾರದ ಅವಧಿಯಲ್ಲಿ ಸುಮ್ಮನಿದ್ದ ಬಿಜೆಪಿ ಸರ್ಕಾರವು ದಲಿತರ ಕಣ್ಣೊರೆಸಲು ಚುನಾವಣೆಯ ಸಂದರ್ಭದಲ್ಲಿ ನಾವು ಕೇಂದ್ರ ಸರ್ಕಾರಕ್ಕೆ ಒಳಮಿಸಲಾತಿಯ ವರದಿಯನ್ನು ಶಿಫಾರಸ್ಸು ಮಾಡುತ್ತಿದ್ದೇವೆ ಎಂದು ಸುಳ್ಳು ಹೇಳಿ ಇನ್ನೇನು ಒಳಮಿಸಲಾತಿ ಜಾರಿಯಾಗಿಯೇ ಬಿಟ್ಟಿತು ಅನ್ನುವಂತ ಗುಮಾನಿಯನ್ನ ಸೃಷ್ಟಿಸಿ ಇಡೀ ದಲಿತ ಸಮುದಾಯಕ್ಕೆ ಮೋಸ ಮಾಡಿತು ಎಂದು ಆರೋಪಿಸಿದರು.

ಕರ್ನಾಟಕ ದಲಿತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಸಿಟಿ ಆರ್ ಭಾಸ್ಕರ್ ಪ್ರಸಾದ್ ಮಾತನಾಡಿ, ಚುನಾವಣೆಯ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷವೂ ತನ್ನ ಪ್ರಣಾಳಿಕೆಯಲ್ಲಿ ನಾವು ಅಧಿಕಾರಕ್ಕೆ ಬಂದರೆ ಒಳಮೀಸಲಾತಿಯನ್ನು ಜಾರಿ ಮಾಡುತ್ತೇವೆ ಎಂಬ ಭರವಸೆಯನ್ನು ನೀಡಿ ದಲಿತರ ಮತಗಳನ್ನು ಪಡೆಯುವ ಹುನ್ನಾರ ಮಾಡಿ ಅದರಲ್ಲಿ ಯಶಸ್ವಿಯೂ ಆಯಿತು, ಆದರೆ, ತದನಂತರ ಒಳಮಿಸಲಾತಿಯ ಬಗ್ಗೆ ಯಾವುದೇ ಮತಾಗಲಿ, ಅಥವಾ ತೀರ್ಮಾನವಾಗಲಿ ತೆಗೆದುಕೊಳ್ಳಲಿಲ್ಲ, ಎಲ್ಲಾ ರಾಜಕೀಯ ಪಕ್ಷಗಳು ಒಳ ಮೀಸಲಾತಿಯನ್ನು ವಿಷಯವನ್ನು ಕೇವಲ ಚುನಾವಣೆಯ ಸರಕನ್ನಾಗಿ ಬಳಸಿಕೊಂಡು ನಿರಂತರವಾಗಿ ದಲಿತರನ್ನು ಮೋಸ ಮಾಡುತ್ತಿವೆ ಎಂದರು.ಈ ಬಾರಿಯ ಬೆಳಗಾವಿಯಲ್ಲಿ ನಡೆಯಲಿರುವ ಚಳಿಗಾಲದ ಅಧಿವೇಶನದಲ್ಲಿ ಒಳ ಮೀಸಲಾತಿ ಮಸೂದೆಯನ್ನು ಮಂಡಿಸಿ, ಚರ್ಚೆ ಮಾಡಿ ಅದರ ಬಗ್ಗೆ ಸೂಕ್ತ ಕ್ರಮ ಜರುಗಿಸಬೇಕು ಒಳಮೀಸಲಾತಿಯ ಕುರಿತು ಸಕಾರಾತ್ಮಕವಾದಂತ ತೀರ್ಮಾನ ತೆಗೆದುಕೊಳ್ಳದಿದ್ದರೆ ಅಧಿವೇಶನ ಮುಗಿದ ನಂತರ ಇಡೀ ಕರ್ನಾಟಕ ರಾಜ್ಯಾದ್ಯಂತ ಕಾಂಗ್ರೆಸ್ ವಿರುದ್ಧವಾಗಿ ಅಭಿಯಾನವನ್ನು ಶುರು ಮಾಡಿ ಮುಂದಿನ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠವನ್ನು ಕಲಿಸಲಾಗುವುದು ಹಾಗಾಗಿ ಮುಖ್ಯಮಂತ್ರಿಗಳು ಅವರು ಕೊಟ್ಟ ಮಾತಿನಂತೆ ಒಳ ಮೀಸಲಾತಿಯ ಕುರಿತು ಸೂಕ್ತ ನಿರ್ಧಾರವನ್ನು ಕೈಗೊಳ್ಳಬೇಕೆಂದು ಒತ್ತಾಯಿಸಲಾಯಿತು. ಗೋಷ್ಠಿಯಲ್ಲಿ ಶ್ರೀನಿವಾಸ್ ಭಾಗವಹಿಸಿದ್ದರು.

## ಕನಕ ಜಯಂತಿಯಲ್ಲಿ ಮಹಿಳೆಯರು ಭಾಗವಹಿಸಿ

» ಚಿತ್ರದುರ್ಗ

ನ. 30ರಂದು ನಗರದಲ್ಲಿ ನಡೆಯುವ ಕನಕ ಜಯಂತಿ ಕಾರ್ಯಕ್ರಮಕ್ಕೆ ಸಮಾಜದ ಎಲ್ಲಾ ಮಹಿಳೆಯರು ಸಕ್ರಿಯವಾಗಿ ಮೆರವಣಿಗೆ ಮತ್ತು ಕಾರ್ಯಕ್ರಮಕ್ಕೆ ಭಾಗವಹಿಸುವಂತೆ ಎಂದು ನಗರಸಭಾ ಸದಸ್ಯರು, ಕುರುಬರ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆಯಾದ ಮೀನಾಕ್ಷಿ ಮನವಿ ಮಾಡಿದ್ದಾರೆ.



ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ.30 ರಂದು ನಗರದಲ್ಲಿ ಕನಕ ಜಯಂತಿ ಕಾರ್ಯಕ್ರಮ ನಡೆಯಲಿದೆ. ಅಂದು ಕನಕ ವೃತ್ತದಿಂದ ಮೆರವಣಿಗೆ ಪ್ರಾರಂಭವಾಗಿ ತರಾಸು ರಂಗಮಂದಿರದವರೆಗೂ ನಡೆಯಲಿದೆ, ನಂತರ ವೇದಿಕೆ ಕಾರ್ಯಕ್ರಮ ಸಮಾಜ ಭಾಂಧವರಿಗೆ ಸನ್ಮಾನ ಉಪನ್ಯಾಸ ಕಾರ್ಯಕ್ರಮ ನಡೆಯಲಿದೆ. ಜಿಲ್ಲಾ ಸಚಿವರು ಸಮಾರಂಭವನ್ನು ಉದ್ಘಾಟನೆ ಮಾಡಲಿದ್ದು ಜಿಲ್ಲೆಯ ಚುನಾಯಿತ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಅಂದು ಸಮಾಜದ ಮಹಿಳೆಯರು ಹೆಚ್ಚಿನ ರೀತಿಯಲ್ಲಿ ಮೆರವಣಿಗೆ ಮತ್ತು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ಇಂದಿನ ದಿನಮಾನದಲ್ಲಿ ಮಹಿಳೆ ಎಲ್ಲಾ ರಂಗದಲ್ಲಿಯೂ ಸಹಾ ಹಿಂದೆ ಉಳಿದಿದ್ದಾಳೆ, ಆರ್ಥಿಕವಾಗಿ, ಶೈಕ್ಷಣಿಕವಾಗಿ ಸಮಾಜಿಕವಾಗಿ ಮತ್ತು ರಾಜಕೀಯವಾಗಿಯೂ ಸಹಾ ಯಾವುದೇ ಪ್ರಗತಿಯನ್ನು ಸಾಧಿಸಿಲ್ಲ, ಮಹಿಳೆಯರಿಗಾಗಿ ಸರ್ಕಾರ ವಿವಿಧ ರೀತಿಯ ಯೋಜನೆಯನ್ನು ಜಾರಿ ಮಾಡಿದೆ ಅದರ ಫಲದಿಂದ ತಾವುಗಳು ಸ್ವಾವಲಂಬಿಯಾಗಬೇಕಿದೆ ಎಂದು ಕರೆ ನೀಡಿದರು.

ನಮ್ಮ ಸಮಾಜದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಮಹಿಳಾ ಸಬಲೀರಣಕ್ಕೆ ಹೆಚ್ಚಿನ ಒತ್ತು ನೀಡಿದ್ದಾರೆ. ಸಮಾಜದ ನಾಯಕರು ಕೂಡ ಈ ದಿಸೆಯಲ್ಲಿಯೇ ಆಲೋಚನೆಯನ್ನು ಮಾಡಬೇಕು, ಕಟ್ಟ ಕಡೆಯ ಮಹಿಳೆಗೂ ಸಹಾ ಸರ್ಕಾರದ ಸೌಲಭ್ಯ ಸಿಗಬೇಕಿದೆ. ಎಂದು ಮೀನಾಕ್ಷಿ ತಿಳಿಸಿದರು.

ಗೋಷ್ಠಿಯಲ್ಲಿ ಸರೋಜ, ಶಾಂತ, ಶೋಭಾ, ನಾಗೇಶ್, ನಾಗಭೂಷಣ್, ಲೀಮಾವತಿ, ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನಾಯಕನಹಟ್ಟಿ: ಕರವೇಯಿಂದ ಕನ್ನಡ ರಾಜ್ಯೋತ್ಸವ ಆಚರಣೆ



» ನಾಯಕನಹಟ್ಟಿ

ಕನ್ನಡ ನಾಡು, ನುಡಿ, ಜಲ, ಭೂಮಿ ಇವೆಲ್ಲ ನಮ್ಮ ಕನ್ನಡಿಗರ ಸ್ವತ್ತು ಎಂದು ಜಾಗನೂರಹಟ್ಟಿ ಎಂ.ಟಿ. ಮಂಜುನಾಥ ಸಾಹಿತಿಗಳು ಹೇಳಿದರು.ಪಟ್ಟಣದ ಪಾದಗಟ್ಟೆ ಮುಂಭಾಗದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್‌ಕುಮಾರ್ ಶೆಟ್ಟಿ 68ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಬರಿ ಸಂಘಟನೆಯೊಂದಿಗೆ ಮಾತ್ರವಲ್ಲ, ಇಡೀ ಕರ್ನಾಟಕದ ಆಸ್ತಿ, ನಮ್ಮ ಕನ್ನಡ ತಾಯಿ ಭುವನೇಶ್ವರಿಯು ಎಲ್ಲಾ ಜಾತಿ, ಧರ್ಮ, ಭಾಷೆಯನ್ನು ತನ್ನ ಒಡಲಿನಲ್ಲಿ ಅಡಗಿಸಿದ್ದಾಳೆ ಯಾವುದೇ ಭಾಷೆಯನ್ನು ಆಡಬೇಕು, ಆಡಬಾರದು ಎಂಬುವುದು ಇಲ್ಲ, ಆದರೆ ಒಂದು ಸಂಗತಿ ಎಂದರೆ ಕನ್ನಡವನ್ನು ಮಾತನಾಡಲು ಪಕ್ಷಿಗಳು, ಪ್ರಾಣಿಗಳು ಸಹ ಮುಂದೆ ಇವೆ ಕೋಗಿಲೆ ಕುಹೂ-ಕುಹೂ ಎಂದು, ಕಾಗೆ ಕಾ,ಕಾ ಎಂದು ಪಾರಿವಾಳ ಗೂ,ಗೂ ಎಂದು ಕೋಳಿ ಕ್ಕೊ,ಕ್ಕೊ ಎಂದು, ಬೆಕ್ಕು ಮ್ಯಾವ್,ಮ್ಯಾವ್ ಎಂದು ಹಸು ಹಂಬಾ ಎಂದು ಕೂಗಿ, ಪ್ರಾಣಿ ಪಕ್ಷಿಗಳು ಕೂಗಿ ಕನ್ನಡ ಮಾತನಾಡುತ್ತವೆ. ಇಂತಹ ನಾಡಿನಲ್ಲಿ ನಾವು ಇಂಗ್ಲಿಷ್, ಪದಗಳಿಗೆ ಬಂದು ಕೂತಿದ್ದೇವೆ. ನಮ್ಮ ಮಕ್ಕಳು ಮನೆಯಲ್ಲಿ ಹುಟ್ಟಿದ ದಿನದಂದೆ ಅಮ್ಮ ಎಂದು ಕರೆಯುತ್ತದೆ ಎಂದು ಅವರು ಮಾತನಾಡಿದರು.

ನೀರಾವರಿ ಹೋರಾಟ ಸಮಿತಿ ಅಧ್ಯಕ್ಷರಾದ ಮುದಿಯಪ್ಪ ಮಾತನಾಡಿ ಎಷ್ಟು ಭಾಷೆ ಕಲಿತರು ಮೊದಲು ನಮ್ಮ ಬಾಯಿಯಲ್ಲಿ ಬರುವುದೇ ಕನ್ನಡ ಭಾಷೆಯೊಂದೆ, ನಾವೆಲ್ಲರೂ ಕನ್ನಡವನ್ನು ಪ್ರೀತಿಸಬೇಕು ನಾವೆಲ್ಲರೂ ಕನ್ನಡದಲ್ಲೇ ಮಾತನಾಡಬೇಕು, ಕನ್ನಡ ರಾಜ್ಯೋತ್ಸವ, ಕನ್ನಡ ಭಾಷೆಯನ್ನು ಮತ್ತಷ್ಟು ಬೆಳೆಸೋಣ ಎಂದು ಅವರು ಮಾತನಾಡಿದರು.ಅಬ್ಬೇನಹಳ್ಳಿ ಮಾಜಿ ಗ್ರಾ.ಪಂ. ಅಧ್ಯಕ್ಷರು ಮತ್ತು ಹಾಲಿ ಸದಸ್ಯರಾದ ಶಂಕರ್‌ಮೂರ್ತಿ ಮಾತನಾಡಿ ನಾವು ಕೇವಲ ನವಂಬರ್ ಕನ್ನಡಿಗರಾಗದೆ ಕನ್ನಡ ನಾಡಿನ ಪ್ರಜೆಯಾಗಿ ಕನ್ನಡದಲ್ಲೇ ಮಾತನಾಡೋಣ ಎಂದರು. ಆಂಗ್ಲ ಮಾದ್ಯಮ ಶಾಲೆಗೆ ಮಕ್ಕಳನ್ನು ಸೇರಿಸದೆ ಕನ್ನಡ ಶಾಲೆಗೆ ಕಳುಹಿಸಿ ನಾವು ಯಾವುದೇ ಕಾರಣಕ್ಕೂ ನಮ್ಮ ಭಾಷೆಯನ್ನು ಮರೆಯಬಾರದು.

## ಮುಖ್ಯಮಂತ್ರಿಗಳ ಜನತಾ ದರ್ಶನ: ಜನರ ಸಮಸ್ಯೆಗಳಿಗೆ ಪರಿಹಾರ

» ಚಿತ್ರದುರ್ಗ

ಬೆಂಗಳೂರಿನ ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ಸೋಮವಾರ ಬೃಹತ್ ಜನತಾ ದರ್ಶನ ಕಾರ್ಯಕ್ರಮ ಜರುಗಿತು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯದ ನಾನಾ ಭಾಗಗಳಿಂದ ಆಗಮಿಸಿದ ಸಾರ್ವಜನಿಕರು ಅಹವಾಲುಗಳನ್ನು ಸ್ವೀಕರಿಸಿ, ಸ್ಪಂದಿಸಿ ಸ್ಥಳದಲ್ಲಿಯೇ ಪರಿಹಾರವನ್ನು ಒದಗಿಸಿದರು. ಈ ಬಾರಿಯ ಜನತಾ ದರ್ಶನ ಕಾರ್ಯಕ್ರಮ ವಿನೂತನವಾಗಿದ್ದು, ಜನರ ಅಹವಾಲುಗಳಿಗೆ ತಕ್ಷಣವೇ ಪರಿಹಾರ ಕಂಡುಕೊಳ್ಳಲು ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಆನ್ ಲೈನ್ ವಿಡಿಯೋ ಮೂಲಕ ಕಾರ್ಯಕಮದಲ್ಲಿ ಹಾಜರಿದ್ದರು. ಚಿತ್ರದುರ್ಗ ಜಿಲ್ಲೆಗೆ ಸಂಬಂಧಿಸಿದಂತೆ ನಗರದ ಜಿಲ್ಲಾಧಿಕಾರಿ ಕಛೇರಿ ಕೆಸ್ವಾನ್ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ನೇತೃತ್ವದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.



**ಪ್ರಮುಖ ಸುದ್ದಿ**

# ಜನರ ಸಮಸ್ಯೆಗಳ ಪರಿಹಾರಕ್ಕೆ ಸಿಎಂ 15 ದಿನ ಗಡುವು


» ಮೊದಲ ಪುಟದಿಂದ


ಜನಸ್ಪಂದನ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದ ಬಳಿಕ ಅಧಿಕಾರಗಳನ್ನು ಉದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜನಸ್ಪಂದನ ಕಾರ್ಯಕ್ರಮವು ಎರಡು ತಿಂಗಳ ಹಿಂದಯೇ ನಡೆಯಬೇಕಿತ್ತು. ಜಿಲ್ಲಾ ಉಸ್ತುವಾರಿ ಸಚಿವರಿಗೂ ಸಹ ತಮ್ಮ ಜಿಲ್ಲೆಗಳಲ್ಲಿ ಜನತಾ ದರ್ಶನ ಕಾರ್ಯಕ್ರಮ ನಡೆಸಲು ಪತ್ರವನ್ನು ಬರೆದು ಜಿಲ್ಲೆಗಳಲ್ಲಿ ಕಾರ್ಯಕ್ರಮ ಆಯೋಜಿಸಲು ತಿಳಿಸಲಾಗಿತ್ತು. ಅದರಂತೆ ಜಿಲ್ಲಾ ಉಸ್ತುವಾರಿ ಸಚಿವರು ಜನತಾ ದರ್ಶನ ಕಾರ್ಯಕ್ರಮವನ್ನು ನಡೆಸಿ, ಬಹುತೇಕ ಸಮಸ್ಯೆಗಳಿಗೆ ಸ್ಥಳೀಯವಾಗಿ ಪರಿಹಾರ ನೀಡಿರುತ್ತಾರೆ ಎಂದು ಹೇಳಿದರು.

ಜನಸ್ಪಂದನ ಕಾರ್ಯಕ್ರಮದಲ್ಲಿ ಹಲವು ವೈದ್ಯಕೀಯ ವೆಚ್ಚ, ಕಂದಾಯ ಹಾಗೂ ಪೊಲೀಸ್ ಇಲಾಖೆಗಳಿಗೆ ಸಂಬಂಧಪಟ್ಟ ಸಮಸ್ಯೆಗಳೇ ಹೆಚ್ಚಾಗಿ ಬಂದಿವೆ. ಇವತ್ತು ನಡೆದ ಜನ ಸ್ಪಂದನ ಕಾರ್ಯಕ್ರಮದಲ್ಲಿ ಜನರಿಂದ 3500 ಅರ್ಜಿಗಳು ಬಂದಿದ್ದು, ಕಾನೂನಿನಲ್ಲಿ ಅವಕಾಶವಿದ್ದರೆ, ಪರಿಹಾರ ನೀಡಲು ಕ್ರಮವಹಿಸಬೇಕು. ಇಲ್ಲದಿದ್ದಲ್ಲಿ, ಯಾವ ಕಾರಣಕ್ಕೆ ಕ್ರಮವಹಿಸಲು ಸಾಧ್ಯವಿಲ್ಲ ಎಂಬುವುದನ್ನು ಮುಖ್ಯಮಂತ್ರಿಯವರ ಕಚೇರಿಗೆ ತಿಳಿಸಬೇಕು ಎಂದು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.





ಜಿಲ್ಲಾಧಿಕಾರಿಗಳು ಮತ್ತು ತಹಶೀಲ್ದಾರ್‌ಗಳು ಸ್ಥಳೀಯ ಹಂತದಲ್ಲೆ ಸಮಸ್ಯೆಗಳಿಗೆ ಪರಿಹಾರಕ್ಕೆ ಕ್ರಮವಹಿಸಬೇಕು. ಪೊಲೀಸ್ ಇಲಾಖೆಯ ಸಮಸ್ಯೆಯೂ ಸಹ ಸ್ಥಳೀಯ ಹಂತದಲ್ಲಿ ಬಗೆಹರಿಸುವ ಸಮಸ್ಯೆಗಳೆ ಆಗಿದ್ದು, ಇಂದು ನಡೆದ ಜನಸ್ಪಂದನ ಕಾರ್ಯಕ್ರಮದ ಅರ್ಜಿಗಳಿಗೆ ಒಂದು ವಾರ ಅಥವಾ ಹದಿನೈದು ದಿನದಲ್ಲಿ ಪರಿಹಾರ ನೀಡಬೇಕು. ಇಲ್ಲದಿದ್ದಲ್ಲಿ, ಪರಿಹಾರಕ್ಕೆ ನೀಡಲು ಯಾಕೆ ಸಾಧ್ಯವಿಲ್ಲ ಎಂದು ಲಿಖಿತ ರೂಪದಲ್ಲಿ ಪತ್ರವನ್ನು ನೀಡಬೇಕು. ಪ್ರತಿ ಮೂರು ತಿಂಗಳಿಗೊಮ್ಮೆ ಜನಸ್ಪಂದನ ಕಾರ್ಯಕ್ರಮವನ್ನು ನಡೆಸಲಾಗುವುದು. ನಾನೂ ಸಹ ಸರ್ಕಾರಿ ಕಚೇರಿಗಳಿಗೆ ಭೇಟಿ ನೀಡಿ ಪರಿಹಾರಕ್ಕೆ ಸಂಬಂಧಿಸಿದಂತೆ ಯಾವ ಕ್ರಮವನ್ನು ಅಧಿಕಾರಿಗಳು ಮಾಡಿರುವ ಕುರಿತು ಪರಿಶೀಲನೆ ನಡೆಸುತ್ತೇನೆ ಎಂದರು.

ಮುಂದಿನ ಬಾರಿ ನಡೆಯುವ ಜನಸ್ಪಂದನ ಕಾರ್ಯಕ್ರಮದಲ್ಲಿ ಸಮಸ್ಯೆಗಳ ಸಂಖ್ಯೆ ಇಳಿಮುಖವಾಗಬೇಕು. ಇಲ್ಲಿಗೆ ಬಂದಿರುವ ಬಹುತೇಕ ಅರ್ಜಿಗಳು ಜಿಲ್ಲಾ ಹಂತದಲ್ಲಿ ಪರಿಹಾರ ನೀಡುವಂತಹ ಅರ್ಜಿಗಳು ಆಗಿದ್ದು, ಸ್ಥಳೀಯ ಹಂತದಲ್ಲಿ ಪರಿಹಾರಕ್ಕೆ ಅಧಿಕಾರಿಗಳು ಮುಂದಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಜನರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಪರಿಹಾರಕ್ಕೆ ಎಲ್ಲಾ ಹಂತದಲ್ಲಿ ಅಧಿಕಾರಿಗಳು ಕ್ರಮವಹಿಸಬೇಕು. ಜನರ ತೆರಿಗೆ ಹಣದಿಂದ ನಮಗೆ ಸಂಬಳ ಬರುತ್ತಿದೆ. ಜನಪ್ರತಿನಿಧಿಗಳು ಹಾಗೂ ಸರ್ಕಾರಿ ನೌಕರರು ತಮ್ಮ ಜವಾಬ್ದಾರಿಯನ್ನು ಅರಿತು ಜನರ ಸಮಸ್ಯೆಗೆ ಸ್ಪಂದಿಸುವ ಕೆಲಸವನ್ನು ಜವಾಬ್ದಾರಿಯಿಂದ ಮಾಡಬೇಕು ಎಂದು ಹೇಳಿದರು.

ಇದೇ ವೇಳೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ವರ್ಷ 4000 ತ್ರಿಚಕ್ರ ವಾಹನವನ್ನು ವಿಕಲಚೇತನರಿಗೆ ನೀಡಲು ಸಂಬಂಧಿಸಿದ ಇಲಾಖೆಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

**ಜನಸ್ಪಂದನ:** ಕಾರ್ಯಕ್ರಮದ ಕೊನೆಯ ಹಂತದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಹವಾಲು ನೀಡಲು ಸರದಿ ಸಾಲಿನಲ್ಲಿ ನಿಂತಿದ್ದ ಜನರ ಬಳಿಗೆ ತೆರಳಿ ಅರ್ಜಿಗಳನ್ನು ಖುದ್ದು ಪಡೆದು, ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ನೀಡಿದರು. ಇದಕ್ಕೂ ಮುನ್ನ ವಿಕಲಚೇತನರ ಬಳಿ ಹೋಗಿ ಅಹವಾಲು ಸ್ವೀಕರಿಸಿ, ತ್ವರಿತವಾಗಿ ಪರಿಹಾರ ನೀಡಲು ಅಧಿಕಾರಿಗಳಿಗೆ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ, ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮಾ, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಾದ ಶಾಲಿನಿ ರಜನೀಶ್ ಸೇರಿದಂತೆ ಎಲ್ಲಾ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಜಿಲ್ಲಾ ಆಸ್ಪತ್ರೆಯಲ್ಲಿ ಹಣ ನೀಡಬೇಡಿ: ಜಿಲ್ಲಾ ಶಸ್ತ್ರಚಿಕಿತ್ಸಕ ಎಸ್.ಪಿ.ರವೀಂದ್ರ

■ ಜನಾಶಯಪ್ರಭ ಚಿತ್ರದುರ್ಗ

ರೋಗಿಗಳು ಹಾಗೂ ಅವರ ಸಂಬಂಧಿಗಳು ಜಿಲ್ಲಾ ಆಸ್ಪತ್ರೆಯಲ್ಲಿ ಯಾವುದೇ ಕಾರಣಕ್ಕೂ ವೈದ್ಯಕೀಯ ಸಿಬ್ಬಂದಿ ಹಾಗೂ ಮಧ್ಯವರ್ತಿಗಳಿಗೆ ಹಣ ನೀಡಬೇಡಿ ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಎಸ್.ಪಿ.ರವೀದ್ರ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿರುವ ಅವರು ರೋಗಿಗಳು ಯಾರಿಗೂ ಹಣ ನೀಡಿ ಪ್ರೋತ್ಸಾಹಿಸಬಾರದು. ಆಸ್ಪತ್ರೆಯಲ್ಲಿ ಯಾರಾದರೂ ಹಣ ಕೇಳಿದಲ್ಲಿ ಕೂಡಲೇ ಜಿಲ್ಲಾ ಶಸ್ತ್ರಚಿಕಿತ್ಸಕರ ಗಮನಕ್ಕೆ ತರಬೇಕು. ರೋಗಿಗಳು ಆಸ್ಪತ್ರೆಗೆ ಬರುವಾಗ ತಪ್ಪದೇ ಆಧಾರ್ ಕಾರ್ಡ್ ಮತ್ತು ರೇಷನ್ ತರಬೇಕು. ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಯೋಜನೆಯಡಿ ದಾಖಲಾದ ಎಲ್ಲಾ ರೋಗಿಗಳಲ್ಲಿ ಉಚಿತ ಚಿಕಿತ್ಸೆಯನ್ನು ನೀಡಲಾಗುತ್ತದೆ. ಆಸ್ಪತ್ರೆಯಲ್ಲಿ ದಾಖಲಾದಾಗ ರೋಗಿಯವರನ್ನು ನೋಡಲು ನಿಗದಿತ ಸಮಯದಲ್ಲಿ ಮಾತ್ರ ಸಾರ್ವಜನಿಕರು ಆಸ್ಪತ್ರೆ ಭೇಟಿ ಮಾಡಬೇಕು. ಆಸ್ಪತ್ರೆಯ ಆವರಣವನ್ನು ಸ್ವಚ್ಛವಾಗಿರಿಸಲು ಸಹಕರಿಸಬೇಕು. ಜಿಲ್ಲಾ ಆಸ್ಪತ್ರೆಯ ಬಗ್ಗೆ ಯಾವುದೇ ದೂರುಗಳು ಇದ್ದಲ್ಲಿ ಮೊಬೈಲ್ ಸಂಖ್ಯೆ 9449843163 ಕರೆ ಮಾಡುವಂತೆ ಅವರು ತಿಳಿಸಿದ್ದಾರೆ.

### 29ರಂದು ಕುರುಮರಡಿಕೆರೆಯಲ್ಲಿ ಜನತಾ ದರ್ಶನ

■ ಚಿತ್ರದುರ್ಗ

ತಾಲ್ಲೂಕಿನ ಕಸಬಾ ಹೋಬಳಿ ಕುರುಮರಡಿಕೆರೆ ಗ್ರಾಮದಲ್ಲಿ ಇದೇ ನವೆಂಬರ್ 29ರಂದು ಬೆಳಿಗ್ಗೆ 10ಕ್ಕೆ "ಜನತಾದರ್ಶನ"ಕಾರ್ಯಕ್ರಮಹಮ್ಮಿಕೊಳ್ಳಲಾಗಿದೆ. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆಯಲ್ಲಿ ಹಾಗೂ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ನೇತೃತ್ವದಲ್ಲಿ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಚಿತ್ರದುರ್ಗ ತಾಲ್ಲೂಕಿಗೆ ಸಂಬಂಧಿಸಿದಂತೆ ಜನಪ್ರತಿನಿಧಿಗಳು ಹಾಗೂ ಇಲ್ಲಾ ಇಲಾಖೆ ಅಧಿಕಾರಿ ವರ್ಗದವರು ಹಾಜರಿರುತ್ತಾರೆ. ಚಿತ್ರದುರ್ಗ ತಾಲ್ಲೂಕಿನ ಎಲ್ಲಾ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಅಹವಾಲುಗಳನ್ನು ಸಲ್ಲಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

### ನಾಳೆ ವಿದ್ಯುತ್ ವ್ಯತ್ಯಯ

■ ಚಿತ್ರದುರ್ಗ

ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿ ಮಧುರೆ, ರಾಮಗಿರಿ, ಹೊಳಲ್ಕೆರೆ, ಹಾಲುರಾಮೇಶ್ವರ, ಹೊಸದುರ್ಗ,ಮಾಡದಕೆರೆ,ನಿರಗುಂದ,ಬಾಗೂರು, ಕಂಚೀಪುರ, ಮತ್ತೋಡು, ಗರಗ, ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯಕ್ಕಾಗಿ ವಿದ್ಯುತ್ ವಿತರಣಾ ಕೇಂದ್ರಗಳಿಗೆ ಮಾರ್ಗ ಮುಕ್ತತೆ ನೀಡಬೇಕಾಗಿರುವುದರಿಂದ ಈ ವಿ.ವಿ.ಕೇಂದ್ರಗಳಿಂದ ಸರಬರಾಜಾಗುವ ಎಲ್ಲಾ ಎನ್.ಜೆ.ವೈ ಮತ್ತು ಕೃಷಿ 11 ಕೆ.ವಿ ಮಾರ್ಗಗಳಲ್ಲಿ ಇದೇ ನವೆಂಬರ್ 29ರಂದು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಅಡಚಣೆಯಾಗುವ ಮಧುರೆ, ರಾಮಗಿರಿ, ಹೊಳಲ್ಕೆರೆ, ಹಾಲುರಾಮೇಶ್ವರ, ಹೊಸದುರ್ಗ, ಮಾಡದಕೆರೆ, ನಿರಗುಂದ, ಬಾಗೂರು, ಕಂಚೀಪುರ, ಮತ್ತೋಡು, ಗರಗ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ಅಡಚಣೆಯಾಗಲಿದೆ.

### ಹಣಕ್ಕಾಗಿ ಲ್ಯಾಬ್ ಟೆಕ್ನಿಷೀಯನ್ ವಿದ್ಯಾರ್ಥಿಯನ್ನು ಕಿಡ್ನಾಪ್ ಮಾಡಿದ ಅಪರಿಚಿತ ವ್ಯಕ್ತಿ

» ಚಳ್ಳಕೆರೆ

ತಾಲ್ಲೂಕಿನ ಗೋಪನಹಳ್ಳಿ ಗ್ರಾಮದ ಎನ್.ಸ್ವಾಮಿ(17) ವಿದ್ಯಾರ್ಥಿ ಚಿತ್ರದುರ್ಗಕ್ಕೆ ಲ್ಯಾಬ್ ಟೆಕ್ನಿಷಯನ್ ವ್ಯಾಸಂಗಕ್ಕಾಗಿ ಪ್ರತಿನಿತ್ಯ ಗೋಪನಹಳ್ಳಿಯಿಂದ ಚಿತ್ರದುರ್ಗಕ್ಕೆ ಹೋಗುತ್ತಿದ್ದು, ಸೋಮವಾರ ಎಂದಿನಂತೆ ಗ್ರಾಮದ ಖಾಸಗಿ ಬಸ್‌ನಿಂದ ಚಿತ್ರದುರ್ಗಕ್ಕೆ ತೆರಳು ಪಾವಗಡ ರಸ್ತೆಯಲ್ಲಿ ಇಳಿದಾಗ ಅಪರಿಚಿತ ವ್ಯಕ್ತಿಗಳು ಅವನನ್ನು ನಿರ್ಜನ ಪ್ರದೇಶಕ್ಕೆ ಕರೆದ್ಯೊಯ್ದು ಚಾಕುತೋರಿಸಿ ನಿಮ್ಮ ಪೋಷಕರಿಂದ ಹಣ ಪೋನ್ ಪೇ ಮಾಡಿಸು, ಇಲ್ಲವಾದಲ್ಲಿ ನಿನ್ನನ್ನು ಬೇರೆಕಡೆ ಕರೆದ್ಯೊಯ್ದು ಕೊಲೆ ಮಾಡುವ ಬೆದರಿಕೆ ಹಾಕಿದ್ದಾರೆ. ಕೂಡಲೇ ಎಂ.ಸ್ವಾಮಿ ತನ್ನ ತಂಡೆ ನಟರಾಜಗೆ ದೂರವಾಣಿ ಮೂಲಕ ಪೋನ್ ಮಾಡಿದಾಗ ಅವನು ಕೇವಲ ನಾಲ್ಕು ಸಾವಿರ ಮಾತ್ರ ಪೋನ್ ಪೇ ಮಾಡಿದ್ದಾರೆ. ಆದರೂ ವ್ಯಕ್ತಿಗಳು ವಿದ್ಯಾರ್ಥಿಯನ್ನು ಬಿಡದೆ ಕರೆದುಕೊಂಡು ದಾವಣಗೆರೆಗೆ ಅಪರಿಸಿಕೊಂಡು ಹೋಗಿದ್ದಾರೆ. ಅಲ್ಲಿ ಈ ವಿದ್ಯಾರ್ಥಿ ಚಾಣಾಕ್ಷತನದಿಂದ ಅಪಹರಣಕಾರರಿಂದ ತಪ್ಪಿಸಿಕೊಂಡು ಬಡಾವಣೆ ಪೊಲೀಸರಿಗೆ ಮಾಹಿತಿ ನೀಡಿದ್ದು, ಕೂಡಲೇ ಪೊಲೀಸರು ಯುವಕನಿಂದ ಮಾಹಿತಿ ಪಡೆದು ಪೋಷಕರನ್ನು ಕರೆಸಿಕೊಂಡು ಅಪರಿಚಿತ ವ್ಯಕ್ತಿಗಳ ಕೃತ್ಯದ ಬಗ್ಗೆ ದೂರು ಸ್ವೀಕರಿಸಿದ್ದಾರೆ.

---

ಹಿರಿಯ ಸಿವಿಲ್ ನ್ಯಾಯಾಧೀಶ ಕೆಂಪರಾಜು ಹೇಳಿಕೆ

# ಭಾರತದ ಸಂವಿಧಾನ ಶ್ರೇಷ್ಠ, ಪ್ರಬುದ್ಧವಾಗಿದೆ

» ಚಿತ್ರದುರ್ಗ

ಭಾರತದ ಸಂವಿಧಾನ ಶ್ರೇಷ್ಠ ಹಾಗೂ ಪ್ರಬುದ್ಧವಾಗಿದೆ. ಪ್ರಪಂಚದ ಎಲ್ಲಾ ರಾಷ್ಟ್ರಗಳು ಭಾರತದ ಸಂವಿಧಾನವನ್ನು ಮೆಚ್ಚಿಕೊಂಡಿವೆ ಎಂದು ಪ್ರಧಾನ ಹಿರಿಯ ಸಿವಿಲ್ ಹಾಗೂ ಜಿಲ್ಲಾ ಮುಖ್ಯ ನ್ಯಾಯಾಧೀಶ ಕೆಂಪರಾಜು ಹೇಳಿದರು.

ಸೋಮವಾರ ನಗರದ ಜಿಲ್ಲಾ ವಕೀಲರ ಭವನದಲ್ಲಿ, ರಾಜ್ಯ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ ಮತ್ತು ಸರಸ್ವತಿ ಕಾನೂನು ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ, ಸಂವಿಧಾನ ದಿನಾಚರಣೆ ಅಂಗವಾಗಿ ಆಯೋಜಿಸಲಾಗಿದ್ದ, ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಸಂವಿಧಾನ ನಮ್ಮೆಲ್ಲರಿಗೂ ತಾಯಿ ಇದ್ದಂತೆ. ಇದರ ಮಹತ್ವ ಹಾಗೂ ಮೌಲ್ಯಗಳನ್ನು ಅರಿತು ಕೊಳ್ಳಬೇಕು. ಜಗತ್ತೇ ಮೆಚ್ಚಿದ ಸಂವಿಧಾನ ದೊರೆತಿರುವುದು ನಮ್ಮೆಲ್ಲರ ಪುಣ್ಯ. ಸಂವಿಧಾನ ಮೂಲಭೂತ ಹಕ್ಕುಗಳನ್ನು ನೀಡಿದೆ. ಇದರಡಿ ನಮ್ಮ ಬದುಕು ಸುಗಮವಾಗಿ ನಡೆಯುತ್ತಿದೆ. ಪ್ರತಿಯೊಂದು ಸಮಸ್ಯೆಗಳಿಗೂ ಸಂವಿಧಾನದಲ್ಲಿ ಉತ್ತರ ಕಂಡುಕೊಳ್ಳಬಹುದು. ಒಳ್ಳೆಯ ಉದ್ದೇಶದಿಂದ ಸಂವಿಧಾನ ಓದಿ ಅರ್ಥೈಸಿಕೊಂಡರೆ ಅದರ ಮಹತ್ವ ಮೌಲ್ಯಗಳು ಅರ್ಥವಾಗುತ್ತದೆ.ಸಂವಿಧಾನದ ಶ್ರೇಷ್ಠತೆಯನ್ನು ಮುಂದಿನ ತಲೆಮಾರಿಗೆ ತಿಳಿಸಿಕೊಡಬೇಕಾಗಿದೆ. ದೇಶದ ಜ್ವಲಂತ ಸಮಸ್ಯೆಗಳಿಗೆ ಸಂವಿಧಾನ ಉತ್ತರ ನೀಡಿದೆ. ಹಲವು ಮಹನೀಯರ ಹಗಲು ಇರುಳು ಎನ್ನದೇ ಪರಿಶ್ರಮಪಟ್ಟು, ತಮ್ಮ ಅನುಭವದಿಂದ ಸಂವಿಧಾನ ರೂಪಕೊಟ್ಟಿದ್ದಾರೆ ಎಂದರು.



ಸರಸ್ವತಿ ಕಾನೂನು ಕಾಲೇಜಿನ ಪ್ರಾಂಶುಪಾಲೆ ಪ್ರೊ. ಡಾ. ಎಂ.ಎಸ್ ಸುಧಾದೇವಿಮಾತನಾಡಿ,ಸಂವಿಧಾನದಿಂದ ಸಮಾಜದ ಎಲ್ಲಾ ವರ್ಗದವರಿಗೂ ನ್ಯಾಯ ಸಿಕ್ಕಿದೆ. ಪ್ರತಿಯೊಬ್ಬ ಪ್ರಜೆಗೂ ಸಂವಿಧಾನದ ಆಶಯಗಳ ಮಹತ್ವ ತಲುಪಿಸಬೇಕು. ಪ್ರತಿಯೊಬ್ಬರೂ ಸಂವಿಧಾನ ಗೌರವಿಸಬೇಕು. ಸಂವಿಧಾನದ ಮೂಲ ಪ್ರತಿಯನ್ನು ಕೈ ಬರಹ ಮೂಲಕ ಬರೆಯಲಾಗಿದೆ. 16.22 ಇಂಚು ಅಳತೆ ಚರ್ಮದ ಕಾಗದಗಳ ಈ ಕೃತಿಯು 3.75 ಕೆ.ಜಿ ತೂಕ ಇದೆ. ಹಿಂದಿ ಮತ್ತು ಇಂಗ್ಲೀಷ್ ಭಾಷೆಯಲ್ಲಿ ಬರೆಯಲಾಗಿದೆ. ಅಮೇರಿಕಾ ಮತ್ತು ಬ್ರಿಟನ್ ಸಂವಿಧಾನದ ಕೆಲವು ಉಪಬಂಧಗಳನ್ನು ಎರವಲು ಪಡೆದುಕೊಂಡು ಸಂವಿಧಾನದಲ್ಲಿ ಅಳವಡಿಸಿಕೊಳ್ಳಲಾಗಿದೆ. ಸಂವಿಧಾನ ಅಂಗೀಕಾರ ಸಮಯದಲ್ಲಿ 284 ಸದಸ್ಯರು ಒಪ್ಪಿ ಸಹಿ ಮಾಡಿದ್ದಾರೆ. 2 ವರ್ಷ 11 ತಿಂಗಳು 18 ದಿನಗಳ ಕಾಲ ಚರ್ಚಿಸಿ ಸಂವಿಧಾನವನ್ನು ರಚಿಸಲಾಗಿದೆ ಎಂದರು.

ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ ಮಾತನಾಡಿ ಸಂವಿಧಾನದ ಪ್ರಸ್ತಾವನೆ ಮೆದುಳು ಇದ್ದಂತೆ. ಇಂದಿನ ಯುವ ಪೀಳಿಗೆ ಸಂವಿಧಾನವನ್ನು ಅರ್ಥಮಾಡಿಕೊಂಡು ಓದುಬೇಕು. ಸಂವಿಧಾನ ಸುಂದರ ಬದುಕು ಕೊಟ್ಟಿದೆ ಎಂದರು.ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ. ವಿಜಯ್ ಸಂವಿಧಾನದ ಮಹತ್ವ ಕುರತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಡಾ.ಬಿ.ಆರ್ ಅಂಬೇಡ್ಕರ್ ಮತ್ತು ಮಹಾತ್ಮ ಗಾಂಧೀಜಿ ಅವರ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ಸಮರ್ಪಿಸಲಾಯಿತು.

ನ್ಯಾಯಾಧೀಶರುಗಳಾದ ಉಜ್ವಲ ವೀರಣ್ಣ, ಚೈತ್ರಾ,ಅನಿತಾ ಕುಮಾರಿ, ನೇಮಿಚಂದ್, ಸಹನ, ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ ಅನಿಲ್ ಕುಮಾರ್, ವಕೀಲರುಗಳಾದ ಎಂ. ಮೂರ್ತಿ, ಹನುಮಂತಪ್ಪ, ಗಿರೀಶ್ ಸೇರಿದಂತೆ ಕಾನೂನು ವಿದ್ಯಾರ್ಥಿಗಳು ಇದ್ದರು.

---

ತಾಲ್ಲೂಕು ಸಾಹಿತ್ಯ ಪರಿಷತ್ ವತಿಯಿಂದ ಸುವರ್ಣಮಹೋತ್ಸವ ರಾಜ್ಯೋತ್ಸವ ಸಂಭ್ರಮ

# ಕನ್ನಡ ಬೆಳವಣಿಗೆಗೆ ಸರ್ವರ ಸಹಕಾರ ಅತ್ಯಗತ್ಯ

» ಚಳ್ಳಕೆರೆ

ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಪ್ರತಿಯೊಬ್ಬ ಕನ್ನಡಿಗನ ಆತ್ಮಾಭಿಮಾನದ ನಾಡಹಬ್ಬವಾಗಿದೆ. ಕನ್ನಡ ಭಾಷೆ ಬೇರೆ ಎಲ್ಲಾ ಭಾಷೆಗಳಿಗಿಂತ ಹೆಚ್ಚು ಮೌಲ್ಯ ಹೊಂದಿದ್ದು, ಈ ಭಾಷೆ ನಮ್ಮ ಬದುಕಿನ ಜೀವಭಾವೆಯಾಗಿದೆ. ಇಂತಹ ಕನ್ನಡ ಭಾಷೆ ಉಳಿವಿಗೆ ನಾವೆಲ್ಲರೂ ಕಂಕಣಬದ್ಧರಾಗಬೇಕೆಂದು ಉಪವಿಭಾಗದ ಡಿವೈಎಸ್ಪಿ ಟಿ.ಬಿ.ರಾಜಣ್ಣ ತಿಳಿಸಿದರು.



ಅವರು, ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಹಮ್ಮಿಕೊಂಡಿದ್ದ 50ನೇ ಕನ್ನಡ ಸಂಭ್ರಮ, ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಕಲಾಕುಸುಮ-23 ಕಾರ್ಯಕ್ರಮಕ್ಕೆ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪನಮನ ಅರ್ಪಿಸಿ ಚಾಲನೆ ನೀಡಿ ಮಾತನಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್,ಅನಾಧಿಕೃತವಾಗಿ ಕನ್ನಡ ಭಾಷೆಗೆ 10 ಸಾವಿರ ವರ್ಷಗಳ ಇತಿಹಾಸವಿದ್ದು ಎರಡು ಸಾವಿರ ವರ್ಷಗಳಿಂದ ಈ ಭಾಷೆಯ ಪ್ರಬುದ್ಧಮಾನಕ್ಕೆ ಪ್ರಾಮಾಣಿಕ ಪ್ರಯತ್ನಗಳು ಮುಂದುವರೆದಿವೆ. ಇಂದಿನ ಕನ್ನಡ ನಾಡುನುಡಿ ಹಬ್ಬದ ಸಂಭ್ರಮಕ್ಕೆ ನಮ್ಮ ಜಾನಪದ ಸಾಹಿತ್ಯವೆ ಮೂಲ ಪ್ರೇರಣೆ. ನಾವೆಲ್ಲರೂ ಕನ್ನಡವನ್ನು ಉಳಿಸಿ, ಬೆಳೆಸಿ, ಬಳಸುವ ಸಂಕಲ್ಪ ಮಾಡಬೇಕು ಎಂದರು.

ನಿವೃತ್ತ ಪ್ರಾಂಶುಪಾಲ ಪ್ರೊ.ಸಿ.ಶಿವಲಿಂಗಪ್ಪ ಮಾತನಾಡಿ, ರಾಜ್ಯದ ಎಲ್ಲಾ ಸರ್ಕಾರ ಶಾಲೆಗಳಲ್ಲಿ ಕನಿಷ್ಠಪಕ್ಷ ಪ್ರಾಥಮಿಕ ಶಿಕ್ಷಣವನ್ನಾದರೂ ಕನ್ನಡದಲ್ಲಿ ನೀಡುವಂತಾಗಬೇಕು. ಕನ್ನಡ ನಮ್ಮೆಲ್ಲರ ಹೃದಯ ಭಾಷೆಯಾಗಿದ್ದು, ನಮ್ಮೆಲ್ಲರ ಬದುಕು ಮತ್ತು ಜೀವನವೆ ಕನ್ನಡಮಯವಾಗಿದೆ. ಎಂತಹ ಸಂದರ್ಭದಲ್ಲೂ ಸಹ ನಮ್ಮ ನಾಡು ಭಾಷೆಗೆ ಅನ್ಯಾಯವಾಗದಂತೆ ನಾವೆಲ್ಲರೂ ಧ್ವನಿ ಎತ್ತಬೇಕು. ಕನ್ನಡವಿದ್ದರೆ ಮಾತ್ರ ನಮ್ಮೆಲ್ಲರ ಬದುಕಿಗೆ ವಿಶೇಷ ಅರ್ಥವಿರುತ್ತದೆ ಎಂದರು. ಚಳ್ಳಕೆರೆ ತಾಲ್ಲೂಕು ಕನ್ನಡ ಸಾಹಿತ್ಯಕ್ಕೆ ವಿಶೇಷ ಕೊಡುಗೆ ನೀಡಿದೆ. ಕುವೆಂಪುರವರ ಗುರು ತರಾಸುರವರ ಜನ್ಮ ಭೂಮಿ ನಾಡೋಜ ಸಿರಿಯಜ್ಜಿಯ ತವರು ಭೂಮಿ ನಮ್ಮ ತಾಲ್ಲೂಕು ಎಂದರು.



ಕನ್ನಡ ರಾಜ್ಯೋತ್ಸವ ಪ್ರಶಸ್ತಿ ವಿಜೇತ ಪಿ.ತಿಪ್ಪೇಸ್ವಾಮಿ, ಹಿರಿಯ ಪತ್ರಕರ್ತ ಕೆ.ಎಸ್.ರಾಘವೇಂದ್ರರವರನ್ನು ಸನ್ಮಾನಿಸಿ ಅಭಿನಂದಿಸಿದರು. ಕನ್ನಡ ನಾಡುನುಡಿಯ ಬಗ್ಗೆ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ತಾಲ್ಲೂಕು ಆರು ವಿವಿಧ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿದರು. ನಗರದ ವಿವಿಧ ಪ್ರೌಢಶಾಲೆಗಳ ಮಕ್ಕಳು ವಿವಿಧ ಮನೋರಂಜನೆ ಕಾರ್ಯಕ್ರಮದಲ್ಲಿ ಅಚ್ಚುಕಟ್ಟಾಗಿ ನಡೆಸಿಕೊಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜೆ.ಟಿ.ವೀರಭದ್ರಸ್ವಾಮಿ ವಹಿಸಿದ್ದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ, ನಗರಸಭಾ ಸದಸ್ಯ ಆರ್.ರುದ್ರನಾಯಕ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಬಾಳೆಮಂಡಿರಾಮದಾಸ್, ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘ ಅಧ್ಯಕ್ಷ ಡಿ.ಶ್ರೀನಿವಾಸ್, ಕಾರ್ಯದರ್ಶಿ ಕೆ.ಚಿತ್ತಯ್ಯ, ಸಹಕಾರ್ಯದರ್ಶಿ ಈರಣ್ಣ, ಜಿ.ವಿ.ರಾಜಣ್ಣ, ಕೆಂಚವೀರನಹಳ್ಳಿ ಮಲ್ಲೇಶ್, ಎಂ.ಎನ್. ಮೃತ್ಯುಂಜಯ, ಜಿ.ವಿ.ರಾಜಣ್ಣ, ಕೆಪಿಎನ್ ಗಣೇಶಯ್ಯ ಮುಂತಾದವರು ಉಪಸ್ಥಿತರಿದ್ದರು.

ಜಗಲೂರು, ಮೊಳಕಾಲ್ಮೂರು, ಚಳ್ಳಕೆರೆ ತಾಲ್ಲೂಕುಗಳನ್ನು ಕಲ್ಯಾಣ ಕರ್ನಾಟಕಕ್ಕೆ ಸೇರಿಸುವ ಕಾರ್ಯವನ್ನು ಕಸಾಪ ಕೈಗೊಂಡು 371ನೇ(ಜೆ) ವಿಧಿ ಜಾರಿಗೊಳಿಸಲು ಎಲ್ಲರೂ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಪ್ರೊ.ಸಿ.ಶಿವಲಿಂಗಪ್ಪ ನಿವೃತ್ತ ಪ್ರಾಂಶುಪಾಲ

---

## ಲೋಕಸಭೆಗೆ ಅವಕಾಶಕೊಟ್ಟರೆ ಕಾಂಗ್ರೆಸ್‌ಗೆ ಗೆಲುವಿನ ಉಡುಗೊರೆ: ಎಸ್.ಸುನೀಲ್‌ಕುಮಾರ್



» ಚಳ್ಳಕೆರೆ

ಕಳೆದಸುಮಾರು35ವರ್ಷಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ ಹಲವಾರು ಚುನಾವಣೆಗಳಲ್ಲಿ ಪಕ್ಷದ ಗೆಲುವಿಗೆ ಸಾಕಷ್ಟು ಪರಿಶ್ರಮವಹಿಸಿದ್ದೇನೆ. ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ನಡೆದ ಹೋರಾಟಗಳಲ್ಲಿ ಸಂಕ್ರಿಯಾವಾಗಿ ಪಾಲ್ಗೊಂಡಿದ್ದೇನೆ. 2024ರ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಯಾಗಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧಿಸಲು ನಿರ್ಧರಿಸಿದ್ದು, ಎಲ್ಲರೂ ಸಹಕಾರ ನೀಡಬೇಕೆಂದು ಎಸ್.ಸುನೀಲ್‌ಕುಮಾರ್ ತಿಳಿಸಿದರು.

ಅವರು, ಪ್ರವಾಸಿಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಇತ್ತೀಚಿನ ವರ್ಷದಲ್ಲಿ ಭೇರೆ, ಬೇರೆ ಎಲ್ಲಾ ಪಕ್ಷಗಳು ಹೊರಗಿನ ಅಭ್ಯರ್ಥಿಗೆ ಮಣೆ ಹಾಕುವುದು ಸರಿಯಲ್ಲ. ಎಲ್ಲಾ ರಾಜಕೀಯ ಪಕ್ಷಗಳಲ್ಲೂ ಸ್ಥಳಿಯ ಅಭ್ಯರ್ಥಿಗಳು ಸಾಕಷ್ಟು ಸಂಖ್ಯೆಯಲ್ಲಿದ್ದಾರೆ. ವಿಶೇಷವಾಗಿ ಕಾಂಗ್ರೆಸ್ ಪಕ್ಷದಲ್ಲಿ ಲೋಕಸಭಾ ಚುನಾವಣೆಗೆ ನಾನು ಸೇರಿದಂತೆ ಹತ್ತಾರು ಅಭ್ಯರ್ಥಿಗಳಿದ್ದಾರೆ. ನಾನು ಕಾಂಗ್ರೆಸ್ ಪಕ್ಷದ ವರಿಷ್ಠರಲ್ಲಿ ವಿನಂತಿಸುವುದು ಈ ಬಾರಿ ನನಗೆ ಪಕ್ಷ ಟಿಕೆಟ್‌ನೀಡಿ ಸ್ಪರ್ಧಿಸಲು ಅವಕಾಶ ಮಾಡಿಕೊಟ್ಟಲ್ಲಿ ಸುಲಭವಾಗಿ ಈ ಕ್ಷೇತ್ರದಲ್ಲಿ ವಿಜಯ ಸಾಧಿಸಿ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬುತ್ತೇನೆಂದರು.

ತಾವು ಸ್ಪರ್ಧಿಸಿ ಗೆಲುವು ಸಾಧಿಸಿದರೆ ಚಿತ್ರದುರ್ಗದಲ್ಲಿ ಸುಜ್ಜಿತ ಮೆಡಿಕಲ್ ಕಾಲೇಜು ನಿರ್ಮಾಣಕ್ಕೆ ಪ್ರಥಮ ಆದ್ಯತೆ ನೀಡುತ್ತೇನೆ. ಶೋಷಿತ ಸಮುದಾಯದ ಅಭ್ಯುದಯಕ್ಕೆ ಸದಾ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವೆ. ಜನಸೇವೆ ಮಾಡುವ ಹಂಬಲದಿಂದ ಅಭ್ಯರ್ಥಿಯಾಗಲು ಬಯಸಿದ್ದು, ತಾವೆಲ್ಲರೂ ನನ್ನನ್ನು ಬೆಂಬಲಿಸಬೇಕೆಂದು ಮನವಿ ಮಾಡಿದರು. ಕೆ.ಜಿ.ಅನಂತಮೂರ್ತಿ ನಾಯಕ್, ಕೃಷ್ಣಮೂರ್ತಿ, ತುಳಸಿರಮೇಶ್, ಎಂ.ಎಂ.ನಾಯಕ್, ಸಾಗರ್, ಸಂಜೀವಮೂರ್ತಿ, ನಿರ್ಮಲ, ಪರಮೇಶ್, ದ್ಯಾಮರಾಜು, ಜಾಲಿಮಂಜು, ಮೈತ್ರಿದ್ಯಾಮಣ್ಣ, ಉಮೇಶ್, ಗಂಗಾಧರ, ದಲಿತಸಿಂಹವೀರಣ್ಣ ಮುಂತಾದವರು ಉಪಸ್ಥಿತರಿದ್ದರು.

---

## ಪ್ರಮುಖ ಸುದ್ದಿ

# ಸೋಮೇಶ್ವರ ಶಾಲೆಯಲ್ಲಿ 'ವೀರಭಾರತಿ' ನೃತ್ಯರೂಪಕ

» ದಾವಣಗೆರೆ

'ವೀರಭಾರತಿ' ನೃತ್ಯ ರೂಪಕ ಆಯೋಜನೆ ಮಾಡಿರುವುದು ಮಕ್ಕಳಲ್ಲಿ ದೇಶಾಭಿಮಾನ ಪ್ರಚುರಪಡಿಸಲು ಸಹಾಯಕವಾಗುತ್ತದೆ, ಇಂಥ ಕಾರ್ಯಕ್ರಮಗಳ ಮೂಲಕ ಮಕ್ಕಳಲ್ಲಿ ದೇಶಪ್ರೀತಿ ಹೆಚ್ಚಾಗುವುದು ಎಂದು ಮಾಜಿ ಸಚಿವರಾಗಿ ಎಸ್ ಎರವೀಂದ್ರನಾಥ್ ರವರು ತಿಳಿಸಿದರು.

ನಗರದ ಶ್ರೀಸೋಮೇಶ್ವರ ಶಾಲೆಯಲ್ಲಿ ಎಸ್.ಎ.ರವೀಂದ್ರನಾಥ್ ಅಭಿಮಾನಿ ಬಳಗ ಹಾಗೂ ಶ್ರೀಸೋಮೇಶ್ವರ ಸಮೂಹ ಸಂಸ್ಥೆಗಳು ಅವರ ಹುಟ್ಟುಹಬ್ಬ ಪ್ರಯುಕ್ತ ಏರ್ಪಡಿಸಿದ್ದ ಈ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನನ್ನ ಹುಟ್ಟುಹಬ್ಬ ಹಿನ್ನೆಲೆ ವಿಶೇಷವಾಗಿ ಕಾರ್ಯಕ್ರಮ ಆಯೋಜನೆ ಮಾಡಿದ್ದು ಸಂತೋಷವಾಗಿದೆ ಎಂದರು.

ಶಾಲೆಗಳಲ್ಲಿಇಂಥದೇಶಭಕ್ತಿಮೂಡಿಸುವ ನಾಟಕ, ನೃತ್ಯರೂಪಕ ಆಯೋಜನೆ ಮಾಡಬೇಕು. ಮಕ್ಕಳ ಮನಸ್ಸಲ್ಲಿ ದೇಶಭಕ್ತಿ ಹೆಚ್ಚಿಸಲು ಸಹಾಯವಾಗುತ್ತದೆ ಎಂದರು.





ಸಂಸದರಾದ ಜಿ.ಎಂ. ಸಿದ್ದೇಶ್ವರ್ ಮಾತನಾಡಿ, ರವೀಂದ್ರನಾಥ್ ಅವರಿಗೆ ಹುಟ್ಟುಹಬ್ಬದ ಶುಭಾಶಯ ಕೋರಿ, ಇದೊಂದು ಅಪರೂಪದ ಕಾರ್ಯಕ್ರಮ ಜಿಲ್ಲೆಯ ಹಿರಿಯ ಮುತ್ಸದ್ದಿ ರಾಜಕಾರಣಿಗೆ 'ವೀರಭಾರತಿ' ನೃತ್ಯ ರೂಪಕ ಮೂಲಕ ಅವರಿಗೆ ಅಭಿನಂದಿಸಿರುವುದು ವಿಶೇಷ ಎಂದು ಬಣ್ಣಿಸಿದರು.

ಶ್ರೀಸೋಮೇಶ್ವರ ವಿದ್ಯಾಲಯದ ಗೌರವ ಕಾರ್ಯದರ್ಶಿಗಳಾದ ಕೆ.ಎಂ ಸುರೇಶ್ ವರ್ಷದಲ್ಲಿ ಒಂದೆರೆಡು ಕಾರ್ಯಕ್ರಮ ಮಾಡುತ್ತಾರೆ. ಅದರಲ್ಲೂ ದೇಶಪ್ರೇಮ ಮೂಡಿಸುವ ನೃತ್ಯರೂಪಕ ಏರ್ಪಡಿಸಿರುವುದು ಇತರೆ ವಿದ್ಯಾಸಂಸ್ಥೆಗಳಿಗೂ ಮಾದರಿಯಾಗಿದೆ ಎಂದು ಶ್ಲಾಘನೆ ವ್ಯಕ್ತಪಡಿಸಿದರು.

ಬಳಿಕ ಭಾರತೀಯ ಪರಂಪರೆ ಮತ್ತು ಯುವ ಜನಾಂಗ ವಿಷಯ ಕುರಿತು ಹುಬ್ಬಳಿಯಸಾಮಾಜಿಕಕಾರ್ಯಕರ್ತರಾದ ಡಾ. ಮಲ್ಲಿಕಾರ್ಜುನ ಬಾಳೆಕಾಯಿ ಅವರು ದೇಶಪ್ರೇಮ ಹೆಚ್ಚಿಸುವ ಇಂಥ ನೃತ್ಯರೂಪಕಗಳೇ ಯುವಜನಾಂಗವನ್ನ ಸರಿದಾರಿಗೆ ಕೊಂಡುಯ್ಯುತ್ತದೆ ಎಂದರು. ಇದೇವೇಳೆ ಈ ಬಾರಿಯ ಗೀತಗಾಯನ ಹಾಗೂ ಚರುಂಗ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ನೀಡಿ ಗೌರವಿಸಲಾಯಿತು.

ಮಾಜಿ ಮುಖ್ಯ ಸಚೇತಕ ಡಾ.ಎ.ಹೆಚ್. ಶಿವಯೋಗಿಸ್ವಾಮಿ, ಮಾಜಿ ಶಾಸಕರಾದ ಗುರುಸಿದ್ದನ ಗೌಡ್ರು, ಪ್ರೊ. ಲಿಂಗಣ್ಣ, ಶ್ರೀಸೋಮೇಶ್ವರ ವಿದ್ಯಾಲಯದ ಅಧ್ಯಕ್ಷರಾದ ಅಶೋಕ್ ರೆಡ್ಡಿ, ಗೌರವ ಕಾರ್ಯದರ್ಶಿಗಳಾದ ಕೆ.ಎಂ ಸುರೇಶ್ ಹಾಗೂ ಪ್ರಾಂಶುಪಾಲರು, ಮುಖ್ಯೋಪಾಧ್ಯಾಯರು, ಆಡಳಿತಾಧಿಕಾರಿ, ಶಿಕ್ಷಕ ವರ್ಗ ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕಾಕನೂರು ವಸತಿ ಶಾಲೆಯ ಮಕ್ಕಳು ಅಸ್ವಸ್ಥ: ಅಧಿಕಾರಿಗಳ ವಿರುದ್ಧ ಶಾಸಕ ಶಿವಗಂಗಾ ಆಕ್ರೋಶ



» **ಸಂತೆಬೆನ್ನೂರು (ಚನ್ನಗಿರಿ)**

ತಾಲ್ಲೂಕಿನ ಕಾಕನೂರಿನಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಸಿಬ್ಬಂದಿಗಳ ಬೇಜವಾಬ್ದಾರಿ, ಉದಾಸೀನದ ಫಲವಾಗಿವಸತಿ ಶಾಲೆಯ 23 ಮಕ್ಕಳು ಭಾನುವಾರ ರಾತ್ರಿಯ ಊಟ, ಸೋಮವಾರ ಬೆಳಗ್ಗೆ ತಿಂಡಿಯ ಸೇವಿಸಿದ 23 ಮಕ್ಕಳು ಅಸ್ವಸ್ಥಗೊಂದಿದ್ದು, ಶಾಸಕ ಬಸವರಾಜು ವಿ ಶಿವಗಂಗ ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಅಸ್ವಸ್ಥಗೊಂಡ ಮಕ್ಕಳ ಮಾಹಿತಿ ಪಡೆದಿದ್ದ ಶಾಸಕರು ತಕ್ಷಣವೇ ಎಲ್ಲಾ ಮಕ್ಕಳನ್ನು ಸಂತೆಬೆನ್ನೂರು ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಿ ಕಳಪೆ ಆಹಾರ ನೀಡುತ್ತಿರುವುದನ್ನು ಪತ್ತೆ ಹಚ್ಚಿದ್ದಾರೆ. ಸರ್ಕಾರಿ ವೇತನವನ್ನು ಪಡೆದು ಮಕ್ಕಳ ಅನಾರೋಗ್ಯಕ್ಕೆ ಕಾರಣರಾದ ವಸತಿ ನಿಲಯದ ವಾರ್ಡನ್ ಮತ್ತು ಸಿಬ್ಬಂದಿಗಳನ್ನು ಕೂಡಲೇ ಅಮಾನತು ಮಾಡುವಂತೆ ಶಾಸಕರು ಇಲಾಖೆಯ ಮುಖ್ಯಸ್ಥರಿಗೆ ಸೂಚಿಸಿದ್ದಾರೆ. ಅವಧಿ ಮುಗಿದ ಆಹಾರ ಪದಾರ್ಥಗಳನ್ನು ಆಹಾರ ತಯಾರಿಕೆಗೆ ಬಳಕೆಯಾಗಿರುವುದು, ಸ್ವಚ್ಛತೆ ಮಾಯವಾಗಿರುವುದು,ಮಕ್ಕಳ ದೈನಂದಿನ ಜೀವನಕ್ಕೆ ಅವಶ್ಯಕ ಮೂಲ ಸೌಲಭ್ಯಗಳನ್ನು ನೀಡದೇ ಇರುವುದು, ಕೊಳೆತ ತರಕಾರಿಗಳನ್ನು ಉಪಯೋಗಿಸಿರುವುದು, ವಿದ್ಯಾರ್ಥಿಗಳಿಗೆ ಹಾಸಿಗೆ, ಎಣ್ಣೆ, ಬಿಸಿ ನೀರು ನೀಡದೇ ಇರುವುದರ ಬಗ್ಗೆ ಇಂಚಿಂಚು ಪರಿಶೀಲಿಸಿ ಇಲಾಖೆಯ ಮುಖ್ಯಸ್ಥರಿಗೆ ಶಾಸಕರು ಕಠಿಣ ಕ್ರಮ ವಹಿಸಲು ಸೂಚಿಸಿದ್ದಾರೆ. ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿ ಮಲ್ಲಿಕಾರ್ಜುನ್ ರವರ ನಿರ್ಲಕ್ಷ್ಯ ಧೋರಣೆಯೇ ಇಲಾಖೆಯ ಈ ವ್ಯವಸ್ಥೆಗೆ ನೇರ ಕಾರಣವಾಗಿದ್ದ ಹಿನ್ನೆಲೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು . ಇಲಾಖೆಯ ಕಾರ್ಯವೈಖರಿ ಬಗ್ಗೆ ರಾಜ್ಯ ಮಟ್ಟದ ಇಲಾಖೆಯ ಮುಖ್ಯಸ್ಥರೊಂದಿಗೆ ಈಗಾಗಲೇ ಚರ್ಚಿಸಿರುವ ಶಾಸಕರು, ಮಕ್ಕಳ ಈ ಪರಿಸ್ಥಿತಿಯನ್ನು ಕಂಡು ಸ್ವತಃ ಕಣ್ಣೀರು ತುಂಬಿಕೊಂಡ ಶಾಸಕರು ಮಾನವೀಯತೆಯೊಂದಿಗೆ ಪ್ರಾಮಾಣಿಕ ಸೇವೆಯು ಇಲ್ಲದಿರುವ ಬಗ್ಗೆ ತೀವ್ರ ಬೇಸರ ವ್ಯಕ್ತಪಡಿಸಿದರು. ಇಲಾಖೆಯ ಮುಖ್ಯಸ್ಥರಿಗೆ ತೀವ್ರ ತರಾಟೆ ತೆಗೆದುಕೊಂಡ ಶಾಸಕರು ಉತ್ತಮ ಶಿಕ್ಷಣ ಕೊಡುವುದರ ಜೊತೆ ಮಕ್ಕಳ ಹಕ್ಕುಗಳಿಗೆ ಚ್ಯುತಿ ಬಂದರೆ ಸಹಿಸಲು ಸಾಧ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಮಕ್ಕಳ ಆರೋಗ್ಯದ ಬಗ್ಗೆ ತಾಲ್ಲೂಕು ಆರೋಗ್ಯಾಧಿಕಾರಿರವರಿಗೆ ಶಾಸಕರು ಸ್ವತಃ ಫೋನ್ ಮಾಡಿದಾಗ ಅವರ ಮೊಬೈಲ್ ಸ್ವಿಚ್ ಆಫ್ ಆಗಿದ್ದ ಹಿನ್ನೆಲೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಅಸ್ವಸ್ಥಗೊಂಡ ಮಕ್ಕಳ ಆರೋಗ್ಯದ ಬಗ್ಗೆ ಕರೆ ಮಾಡಿ ಕಾಳಜಿವಹಿಸುವಂತೆ ಸೂಚಿಸಿದರು. ಪ್ರತಿ ಗಂಟೆಗೆ ಒಮ್ಮೆ ಮಾಹಿತಿ ನೀಡುವಂತೆಯೂ ಸೂಚಿಸಿದ್ದಾರೆ.

### ನ.28ರಂದು ಸಮಾಜ ವಿಜ್ಞಾನ ಶಿಕ್ಷಕರ ಶೈಕ್ಷಣಿಕ ಕಾರ್ಯಗಾರ

» **ಚಿತ್ರದುರ್ಗ**

ಜಿಲ್ಲೆಯ ಪ್ರೌಢಶಾಲೆಗಳ ಸಮಾಜ ವಿಜ್ಞಾನ ಬೋಧಿಸುವ ಶಿಕ್ಷಕರಿಗೆ ನ.28 ರಂದು ಬೆಳಿಗ್ಗೆ 10 ಗಂಟೆಗೆ ನಗರದ ತರಾಸು ರಂಗಮಂದಿರದಲ್ಲಿ ಶೈಕ್ಷಣಿಕ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಬೆಂಗಳೂರಿನ ಸರ್ಕಾರಿ ಪ್ರೌಢ ಶಾಲೆ ಸಹ ಶಿಕ್ಷಕ ರಾಜ್ಯ ಸಂಪನ್ಮೂಲ ವ್ಯಕ್ತಿಗಳಾದ ವಸಂತ್‌ಶೆಟ್ಟಿ, ಹಾಗೂ ಬೆಂಗಳೂರಿನ ಶಾರದಾ ಪಬ್ಲಿಕ್ ಸ್ಕೂಲ್ ಎಂ. ಪ್ರಸಾದ್ ತರಬೇತಿ ನೀಡುವರು. ಸಮಾಜ ವಿಜ್ಞಾನ ಬೋಧಿಸುವ ಎಲ್ಲಾ ಶಿಕ್ಷಕರು ಇದರ ಲಾಭ ಪಡೆದುಕೊಳ್ಳುವಂತೆ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ. ರವಿಶಂಕರ್ ರೆಡ್ಡಿ ತಿಳಿಸಿದ್ದಾರೆ.

### ವಿವಿಧ ಯೋಜನೆ: ಅರ್ಜಿ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ವತಿಯಿಂದ 2023–24ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಚೇತನ, ಧನಶ್ರೀ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ, ದೇವದಾಸಿ ಪಜನರ್ವಸತಿ ಹಾಗೂ ಉದ್ಯೋಗಿನಿ ಯೋಜನೆಗಳಿಗೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

### ಉಚಿತ ರಕ್ತದಾನ ಶಿಬಿರದಲ್ಲಿ ಟಿಎಚ್‌ಒ ಡಾ.ಬಿ.ವಿ.ಗಿರೀಶ್ ಸಲಹೆ

# ಜೀವ ಉಳಿಸುವ ಸದುದ್ದೇಶದಿಂದ ರಕ್ತದಾನ ಮಾಡಿ

» **ಚಿತ್ರದುರ್ಗ**

ರಕ್ತದಾನದ ಮಹತ್ವ ಅರಿತು ಜೀವ ಉಳಿಸುವ ಸದುದ್ದೇಶದಿಂದ ರಕ್ತದಾನ ಮಾಡಬೇಕು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಕಾಲೇಜು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ನಗರದ ಡಾಬ್‌ಬಾಸ್ಕೋ ಪದವಿ ಕಾಲೇಜಿನ ಸಭಾಂಗಣದಲ್ಲಿ ಸೋಮವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಕ್ತನಿಧಿ ಬ್ಯಾಂಕ್, ಹೆಚ್‌ಡಿಎಫ್‌ಸಿ ಬ್ಯಾಂಕ್ ಸಹಯೋಗದಲ್ಲಿ ಉಚಿತ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಕ್ತ ಉತ್ಪತ್ತಿ ಮಾಡಲು ಸಾಧ್ಯವಿಲ್ಲ. ಆರೋಗ್ಯವಂತವ್ಯಕ್ತಿಮತ್ತೊಬ್ಬರಿಗೆರಕ್ತದಾನ ಮಾಡಿದರೆ ತುರ್ತು ಸಂದರ್ಭದಲ್ಲಿ ಜೀವ ಉಳಿಸಲು ಸಾಧ್ಯವಾಗುತ್ತದೆ ಎಂದರು.

ಡಾನ್‌ಬಾಸ್ಕೋ ಪದವಿ ಕಾಲೇಜಿನ ಡಾ.ಫಾದರ್ ಜೋ ಮಾತನಾಡಿ, ರಕ್ತದ ಅಗತ್ಯ ಮತ್ತು ಯಾರು ರಕ್ತದಾನ ಮಾಡಬಹುದು, ಎಷ್ಟು ದಿನಗಳಿಗೊಮ್ಮೆ ರಕ್ತದಾನ ಮಾಡಬಹುದು ಎಂಬ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವಿರಬೇಕು. ಈ ನಿಟ್ಟಿನಲ್ಲಿ ಶಿಬಿರ ಆಯೋಜಿಸಲಾಗಿದೆ ಎಂದರು.




ಭಾರತದಲ್ಲಿ ಬಹುಮಟ್ಟಿನ ಜನರು ರಕ್ತದಾನ ಮಾಡಲು ಹೆದರುತ್ತಾರೆ. ಈ ಕುರಿತು ಜಾಗೃತಿ ಮೂಡಿಸಲು ಸರ್ಕಾರ ಕಾಲದಿಂದ ಕಾಲಕ್ಕೆ ಅನೇಕ ಅಭಿಯಾನಗಳನ್ನು ನಡೆಸಿದೆ. ಜೀವ ಉಳಿಸುವ ರಕ್ತದಾನಕ್ಕೆ ಜನಸಮೂಹ ಮುಕ್ತವಾಗಿ ಬರುವಂತಾಗಬೇಕು ಎಂದರು.

ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ರಕ್ತ ದಾನ ಒಬ್ಬರ ಜೀವ ಉಳಿಸುತ್ತದೆ. ಅದಕ್ಕೆ ಯಾವುದೇ ಪರ್ಯಾಯವಿಲ್ಲ. ರಕ್ತದಾನದಿಂದ ಹೆಚ್ಚುವರಿ ಕಬ್ಬಿಣಾಂಶ ಹೊರಹೋಗುತ್ತದೆ. ಹೆಚ್ಚುವರಿ ಕಬ್ಬಿಣಾಂಶದಿಂದ ಅಧಿಕ ರಕ್ತದ ಒತ್ತಡ ಮುಂತಾದ ಅಡ್ಡ ಪರಿಣಾಮಗಳಿರುತ್ತವೆ. ಇದು ಲಿವರ್, ಹೃದಯ ಮತ್ತು ಪಿತ್ತಜನಕಾಂಗದಲ್ಲಿ ಶೇಖರಣೆಯಾಗಿ ಹೃದಯಬೇನೆ, ರಕ್ತದೊತ್ತಡ ಉಲ್ಬಣವಾಗುತ್ತದೆ. ನಾವು ರಕ್ತದಾನ ಮಾಡಿದರೆ ಈ ವಿಷಯಗಳು ಇತ್ಯರ್ಥವಾಗುತ್ತವೆ ಎಂದರು.

ರಕ್ತದಾನ ಕೇಂದ್ರದಲ್ಲಿ ವೈದ್ಯರು ಹೃದಯಬಡಿತ, ರಕ್ತದೊತ್ತಡ, ಕೊಲೆಸ್ಟರಾಲ್, ಹೇಮೋಗ್ಲೋಬಿನ್ ಮಟ್ಟವನ್ನು ಪರೀಕ್ಷೆ ಮಾಡುತ್ತಾರೆ. ರಕ್ತದಾನ ಮಾಡುವ ಮೂಲಕ ನಿಮ್ಮ ಆರೋಗ್ಯದ ಜಾಡು ಹಿಡಿಯಬಹುದು ಮತ್ತು ಆಹಾರ, ವ್ಯಾಯಾಮ, ಜೀವನಶೈಲಿ ಬದಲಾವಣೆ ಮತ್ತಿತರ ಅಂಶಗಳು ಹೇಗೆ ದೇಹದ ಮೇಲೆ ಪರಿಣಾಮ ಬೀರುತ್ತದೆ ಎಂಬುದನ್ನು ತಿಳಿಯಬಹುದು ಎಂದರು.

ಕಾರ್ಯಕ್ರಮದಲ್ಲಿ ಹೆಚ್‌ಡಿಎಫ್‌ಸಿ ಬ್ಯಾಂಕ್ ವ್ಯವಸ್ಥಾಪಕ ಉಮೇಶ್, ಡಾನ್‌ಬಾಸ್ಕೋ ಪದವಿ ಕಾಲೇಜು ಉಪಪ್ರಾಂಶುಪಾಲ ರೆ.ಬೆನ್ನಿ, ಆರೋಗ್ಯ ಮೇಲ್ವಿಚಾರಕ ಹೆಚ್.ಆಂಜನೇಯ, ಕ್ಷೇತ್ರ ಆರೋಗ್ಯಾಧಿಕಾರಿ ಮೂಗಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಎ.ಗಂಗಾಧರ ರೆಡಿ, ಗುರುಮೂರ್ತಿ, ಜಿಲ್ಲಾಸ್ಪತ್ರೆಯ ಡಾ.ಪ್ರಜ್ವಲ್, ಜಿಲ್ಲಾ ರಕ್ತನಿಧಿ ಕೇಂದ್ರದ ಹಿರಿಯ ಲ್ಯಾಬ್ ಟೆಕ್ನಿಷಿಯನ್ ಅಧಿಕಾರಿಗಳಾದ ಸಿ.ವಿ.ಮುರಳೀಧರ, ಚಂದು ಹಿರೇಮಠ್, ಎನ್‌ಎಸ್‌ಎಸ್ ಸಂಯೋಜಕ ಡಾ.ಧನಕೋಟಿ, ಯುತ್ ರೆಡ್ ಕ್ರಾಸ್ ಸಂಯೋಜಕ ರಿಂಕಿ ಸುರೇಶ್ ಸೇರಿದಂತೆ ಮತ್ತಿರರು ಇದ್ದರು. ರಕ್ತದಾನ ಶಿಬಿರದಲ್ಲಿ ಒಟ್ಟು 32 ಯೂನಿಟ್‌ಗಳಷ್ಟು ರಕ್ತ ಸಂಗ್ರಹಣೆ ಮಾಡಲಾಯಿತು.

### ರಾಜ್ಯೋತ್ಸವದ ಸುವರ್ಣ ಮಹೋತ್ಸವ

# ಕನ್ನಡಿಗರ ಸ್ವಾಭಿಮಾನದ ಸಂಕೇತ: ಸುನೀಲ್

» **ಚಳ್ಳಕೆರೆ**

ಕನ್ನಡ ರಾಜ್ಯೋತ್ಸವದ ಸುವರ್ಣ ಮಹೋತ್ಸವ ಸಂಭ್ರಮ ಪ್ರತಿಯೊಬ್ಬ ಕನ್ನಡಿಗನ ಆತ್ಮಾಭಿಮಾನದ ಸಂಕೇತವಾಗಿದೆ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಆಕಾಂಕ್ಷಿ, ವಾಣಿಜ್ಯೋದ್ಯಮಿ ಎಸ್.ಸುನೀಲ್‌ಕುಮಾರ್ ತಿಳಿಸಿದರು.

ಅವರು, ನಗರದ ರೋಟರಿ ಬಾಲಭವನದಲ್ಲಿ ಶಾತವಾಹನ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಸಮಾನ ಮನಸ್ಕರ ಪತ್ರಕರ್ತರು ಹಮ್ಮಿಕೊಂಡಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ವಿವಿಧ ಗಣ್ಯರಿಗೆ ಸನ್ಮಾನಿಸಿ, ಪ್ರಶಸ್ತಿ ಪತ್ರ ವಿತರಿಸಿ ಮಾತನಾಡಿದರು. ಕನ್ನಡ ರಾಜ್ಯೋತ್ಸವ ಪ್ರತಿವರ್ಷ ಆಚರಿಸುವ ನಾಡಹಬ್ಬವಾಗಿದೆ. ಪ್ರತಿಯೊಬ್ಬ ಕನ್ನಡಿಗರೂ ಇಂತಹ ಸುದಿನವನ್ನು ಸದಾನೆನಪಿನಲ್ಲಿಟ್ಟುಕೊಳ್ಳಬೇಕು ಎಂದರು.

ಸಮಾಜ ನಿರ್ಮಾಣದಲ್ಲಿ ಮಾಧ್ಯಮದ ಪಾತ್ರ ಕುರಿತು ಚಿಂತಕ ಮೈತ್ರಿದ್ಯಾಮಯ್ಯ, ಮಾಧ್ಯಮಗಳ ಆಶಯ ಮತ್ತು ಭದ್ರತೆ ಕುರಿತು ಕುಮಾರಜಂಡೇಕುಂಟೆ ಮಾತನಾಡಿದರು. ಇದೇ ಸಂದರ್ಭದಲ್ಲಿ ಮಕ್ಕಳ ತಜ್ಞ ಡಾ.ಬಿ.ಚಂದ್ರ ನಾಯಕ, ಎಚ್.ಎನ್.ಆದರ್ಶ, ಎಂ.ರಘುನಾಥ, ಪೂಜಾರಿ ಹನುಮಂತಪ್ಪ ಮುಂತಾದವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮ ದಲ್ಲಿ ಶಾತವಾಹನ ಗ್ರಾಮಾಭಿವೃದ್ಧಿ ಸಂಸ್ಥೆ ಅಧ್ಯಕ್ಷ ಜಿ.ಕೃಷ್ಣಮೂರ್ತಿ, ನಿರ್ದೇಶಕ ಡಿ.ಮಂಜುನಾಥ, ಅನಂತಮೂರ್ತಿನಾಯಕ್, ರವೀಂದ್ರ, ಡಿ.ಕುಮಾರಸ್ವಾಮಿ,ಸಿ.ರಮೇಶ್,ಎಲ್.ರವಿ,ಮಲ್ಲಿಕಾರ್ಜುನ್, ಶಿವಮೂರ್ತಿ, ದ್ಯಾಮರಾಜ್, ಬಿ.ವೀರಣ್ಣ, ಜಾಲಿಮಂಜುನಾಥ ಉಪಸ್ಥಿತರಿದ್ದರು.



### ರಾಜ್ಯ ಮಟ್ಟದ ಕೀಬೋರ್ಡ್ ಸ್ಪರ್ಧೆ: ಆರ್. ಶಾಲೋಮ್‌ಗೆ ದ್ವಿತೀಯ ಬಹುಮಾನ

» **ಚಿತ್ರದುರ್ಗ**

ಮಕ್ಕಳ ದಿನಾಚರಣೆ ಅಂಗವಾಗಿ 09 ರಿಂದ 16 ವರ್ಷದ ಒಳಗಿನ ಮಕ್ಕಳಿಗಾಗಿ ಬೆಂಗಳೂರಿನ ರಾಜ್ಯ ಬಾಲಭವನ ಸೊಸೈಟಿಯಲ್ಲಿ ನ.21 ರಿಂದ 23 ವರೆಗೆ ಆಯೋಜಿಸಲಾದ ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಚಿತ್ರದುರ್ಗ ಜಟ್‌ಪಟ್‌ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆರ್.ಶಾಲೋಮ್ ಕೀಬೋರ್ಡ್ ವಾದನದಲ್ಲಿ ರಾಜ್ಯಕ್ಕೆ ದ್ವಿತಿಯ ಸ್ಥಾನಗಳಿಸಿ ಬಹುಮಾನ ಪಡೆದಿದ್ದಾನೆ.

ಚಿತ್ರದುರ್ಗ ಬಾಲಭವನದಿಂದ ನ.20 ರಂದು ಕಾರ್ಯಕ್ರಮ ಸಂಯೋಜಕ ಡಿ.ಶ್ರೀಕುಮಾರ್.



ಬೆಂಗಾವಿನಲ್ಲಿ ನೇತೃತ್ವದಲ್ಲಿ ಜಿಲ್ಲೆಯ ಮಕ್ಕಳಿಗೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಿ 10 ವಿದ್ಯಾರ್ಥಿಗಳನ್ನು ರಾಜ್ಯಮಟ್ಟದ ಸ್ಪರ್ಧೆಗಳಿಗೆ ಆಯ್ಕೆ ಮಾಡಲಾಗಿತ್ತು. ಪ್ರದರ್ಶನ ಕಲೆಯಲ್ಲಿ ಕ.ಕೆ.ಇಂಟರ್ ನ್ಯಾಷಿನಲ್ ಶಾಲೆ ಕೆ.ಪಿ.ಎಂ. ಗುರುದೇವ್, ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲೆ ವಿಭಾಗದ ಸಂಜನಾ .ಡಿ, ಜ್ಞಾನ ವಿಕಾಸ ವಿದ್ಯಾಸಂಸ್ಥೆ ನಿಹಾರಿಕ, ವಿ.ಪಿ ಬಡಾವಣೆ ಸ ರ್ಕಾ ರಿ ಹಿರಿಯ ಪ್ರಾಥಮಿಕ ಶಾಲೆ ವೈಷ್ಣವಿ.ಎಸ್, ವಾದ್ಯ ಸಂಗೀತದಲ್ಲಿ ಆರ್.ಶಾಲೋಮ್ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದರು.

### ಕವಾಡಿಗರಹಟ್ಟಿ ಸರ್ಕಾರಿ ಶಾಲೆ ಗೋಡೆಗಳ ಮೇಲೆ ಅರಳಿರುವ ಬಣ್ಣದ ಬಣ್ಣದ ಚಿತ್ರಗಳು



» **ಚಿತ್ರದುರ್ಗ**

ಕಲುಷಿತ ನೀರು ಸೇವನೆಯಿಂದ ಆರು ಮಂದಿಯನ್ನು ಬಲಿ ಪಡೆದು ರಾಜ್ಯಾದ್ಯಂತ ಸದ್ದು ಮಾಡಿದ್ದ ಕವಾಡಿಗರಹಟ್ಟಿಯಲ್ಲಿನ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಗೆ ಸುಣ್ಣ ಬಣ್ಣ ಬಳಿದು ಮಕ್ಕಳ ಪಠ್ಯಕ್ರಮಕ್ಕನುಗುಣವಾಗಿ ವಿವಿಧ ಬಗೆಯ ಚಿತ್ರಗಳನ್ನು ಗೋಡೆ ಮೇಲೆ ಬಿಡಿಸಿ ಮಕ್ಕಳಲ್ಲಿ ಕಲಿಕೆಯ ಆಸಕ್ತಿಯನ್ನು ಹೆಚ್ಚಿಸಲಾಗಿದೆ.

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ 1980 ರಿಂದ 1993 ರ ಅವಧಿಯಲ್ಲಿನ ಹಳೆ ಕಾರ್ಯಕರ್ತರುಗಳಾದ ಉದಯರವಿ, ಡಾ.ಕೆ.ರಾಜೀವಲೋಚನ, ಅರುಣ್‌ಕುಮಾರ್, ವೀರಣ್ಣ ಲ್ಯಾಗೋಟಿ, ಬಿ.ಸಿ.ಎಂ.ಪ್ರಭು, ಎಂ.ಎಲ್.ಸಿ.ರವಿಕುಮಾರ್, ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದ ಉಪಕುಲಪತಿ ಡಾ.ವಿಷ್ಣುಕಾಂತಚಟಪಲ್ಲಿ, ಪೂನಾದ ಹೋಟೆಲ್ ಉದ್ಯಮಿ ಲಕ್ಷ್ಮೀಶ, ನಿಜಗುಣದೇವ್ ಇವರುಗಳು ಸಮ್ಮಿಲನಗೊಂಡು ಕವಾಡಿಗರಹಟ್ಟಿಯಲ್ಲಿ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯನ್ನು ಆಯ್ಕೆ ಮಾಡಿಕೊಂಡ ಫಲವಾಗಿ ರಾಷ್ಟ್ರೀಯ ಕಲಾ ಮಂಚ್ ಮೈಸೂರಿನ ಚಿತ್ರಕಲಾವಿದ ಚಂದ್ರಶೇಖರ್ ಹಾಗೂ ಡ್ರಾಯಿಂಗ್ ವಿದ್ಯಾರ್ಥಿಗಳಾದ ಅನುಶ್ರಿ ಕೆ, ತೇಜಸ್ ಇವರುಗಳು ಕೈಜೋಡಿಸಿ ಶಾಲೆಯ ಗೋಡೆಯ ಮೇಲೆ ಅತ್ಯಾಕರ್ಷಕವಾದ ಚಿತ್ರಗಳನ್ನು ಬಿಡಿಸಿ ಮಕ್ಕಳ ಮನಸ್ಸನ್ನು ಕಲಿಕೆಯ ಕಡೆ ಆಕರ್ಷಿಸಿದ್ದಾರೆ.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸೋಮಶೇಖರ್ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್‌ರೆಡ್ಡಿ ಇವರುಗಳು ಕವಾಡಿಗರಹಟ್ಟಿಯಲ್ಲಿನ ಶಾಲೆಗೆ ಭೇಟಿ ಚಿತ್ರಕಲಾವಿದರ ಕೈಚಳಕದಿಂದ ಗೋಡೆ ಮೇಲೆ ಅರಳಿರುವ ನಾನಾ ಬಗೆಯ ಚಿತ್ರಗಳನ್ನು ಕಂಡು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಪ್ರಮುಖ ಸುದ್ದಿ

### ಎನ್‌ಎಸ್‌ವಿ ಪಾಕ್ಷಿಕ ಮಾಹಿತಿ ಕಾರ್ಯಾಗಾರದಲ್ಲಿ ಟಿಹೆಚ್‌ಒ ಡಾ.ಬಿ.ವಿ.ಗಿರೀಶ್


# ಕುಟುಂಬ ಯೋಜನೆ: ಪುರುಷರ ಸಹಭಾಗಿತ್ವ ಅಗತ್ಯ

» **ಚಿತ್ರದುರ್ಗ**

ಕುಟುಂಬ ಯೋಜನೆ ಅನುಷ್ಠಾನದಲ್ಲಿ ಪುರುಷರು ಭಾಗವಹಿಸಿದರೆ ತಾಯಿ ಮಗುವಿನ ಆರೋಗ್ಯ ಚೆನ್ನಾಗಿರುತ್ತದೆ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಗುಡ್ಡದರಂಗವ್ವನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಎನ್‌ಎಸ್‌ವಿ ಪಾಕ್ಷಿಕ ಕುರಿತು ಅವರು ಮಾತನಾಡಿದರು.

ಪುರುಷ ಸಂತಾನ ಹರಣ ಚಿಕಿತ್ಸೆ ಪಾಕ್ಷಿಕ ಆಚರಣೆಯ ಒಂದನೇ ಸಪ್ತಾಹವನ್ನು ನವೆಂಬರ್ 21 ರಿಂದ 28ರ ವರೆಗೆ ಅರ್ಹ ದಂಪತಿಗಳ ಭೇಟಿ, ಕುಟುಂಬ ಯೋಜನೆ ಅನುಷ್ಠಾನದಲ್ಲಿ ಪುರುಷರ ಸಹಭಾಗಿತ್ವದ ಬಗ್ಗೆ ಅರಿವು ಮೂಡಿಸುವುದಾಗಿದೆ. ಆಶಾ ಕಾರ್ಯಕರ್ತೆಯರು, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು ಮನೆ ಮನೆ ಭೇಟಿ ನೀಡಿ,ಕುಟುಂಬ ಯೋಜನೆ ಅನುಷ್ಠಾನದಲ್ಲಿ ಪುರುಷರನ್ನು ಭಾಗವಹಿಸುವಂತೆ ಮನವೊಲಿಸುವುದಾಗಿದೆ. ನವೆಂಬರ್ 28 ರಿಂದ ಡಿಸೆಂಬರ್ 4 ರವರೆಗೆ ಸೇವಾ ಸಪ್ತಾಹ ನಿರ್ವಹಣೆ ಮಾಡಬೇಕು. ಫಲಾನುಭವಿಗಳನ್ನು ಜಿಲ್ಲಾ ಆಸ್ಪತ್ರೆಗೆ ಕರೆತಂದು ಪುರುಷ ಸಂತಾನ ಹರಣ ಶಸ್ತ್ರಚಿಕಿತ್ಸೆಗೆ ಒಳಪಡಿಸುವುದು ಎಂದರು.



ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಗಾಯ ಹೊಲಿಗೆ ಇಲ್ಲ. ಚಿಕಿತ್ಸಾ ವಿಧಾನಕ್ಕೆ ಕೇವಲ 5 ರಿಂದ 10 ನಿಮಿಷಗಳು ಮಾತ್ರ ಸಾಕು. ಚಿಕಿತ್ಸೆ ಪಡೆದ 10 ನಿಮಿಷಗಳ ಬಳಿಕ ಮನೆಗೆ ಹೋಗಬಹುದು. ಎನ್ ಎಸ್ ವಿ ಮಾಡಿಸಿಕೊಳ್ಳುವುದರಿಂದ ಪುರುಷರ ಲೈಂಗಿಕ ಸಾಮರ್ಥ್ಯ ಕಡಿಮೆಯಾಗುವುದಿಲ್ಲ. ಪುರುಷತ್ವಕ್ಕೆ ಹಾನಿಯಾಗುವುದಿಲ್ಲ. ಈ ಚಿಕಿತ್ಸೆಯಿಂದ ಯಾವುದೇ ರೀತಿ ದೈಹಿಕ ನಿಶಕ್ತಿ ಉಂಟಾಗುವುದಿಲ್ಲ. ಇದು ಎನ್‌ಎಸ್‌ವಿ ಚಿಕಿತ್ಸೆಯ ವಿಭಿನ್ನತೆ ಯಾಗಿದೆ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಇನ್ನು ಮುಂದೆ ನಮಗೆ ಮಕ್ಕಳು ಬೇಡ ಎಂದು ನಿರ್ಧರಿಸಿದವರು ಶಾಶ್ವತ ಸಂತಾನ ಹರಣ ಚಿಕಿತ್ಸೆಯನ್ನುಬಯಸುವವರು ಈ ಕುಟುಂಬ ಕಲ್ಯಾಣ ವಿಧಾನವನ್ನು ಅನುಸರಿಸಬಹುದು. ಎನ್‌ಎಸ್‌ವಿ ಒಂದು ಸುಲಭ ವಿಧಾನ ಆದರೂ ಕೆಲವರಲ್ಲಿ ತಾತ್ಕಾಲಿಕ ಸಣ್ಣಪುಟ್ಟ ಪರಿಣಾಮಗಳು ಉಂಟಾಗಬಹುದು .ಸ್ವಲ್ಪವೂ ನೋವು ಆಗುವುದಿಲ್ಲ. ಚಿಕಿತ್ಸೆ ನಂತರ ಕೆಲಸ ಕಷ್ಟಕರವಾಗಿದ್ದಲ್ಲಿ ಚಿಕಿತ್ಸೆಯ 48 ಗಂಟೆಗಳ ನಂತರ ಕೆಲಸಕ್ಕೆ ಹೋಗಬಹುದು. ಎನ್‌ಎಸ್‌ವಿ ಮಾಡಿಸಿಕೊಳ್ಳುವುದರಿಂದ ಪುರುಷನ ಲೈಂಗಿಕ ಶಕ್ತಿಯಲ್ಲಿ ಕಡಿಮೆಯಾಗುವುದಿಲ್ಲ. ಹೆಂಡತಿಯನ್ನು ಪ್ರೀತಿಸುವವನು ಎನ್ ಎಸ್ ವಿ ಮಾಡಿಸುತ್ತಾನೆ. ಕುಟುಂಬದ ಸರ್ವಾಂಗಿಣ ಜವಾಬ್ದಾರಿಯನ್ನು ಮಹಿಳೆಯ ಹೊರುತ್ತಾಳೆ. ಈ ಒಂದು ಕಾರ್ಯವನ್ನುಪುರುಷರು ಪಡೆದರೆ ಸಂಸಾರ ಖುಷಿಯಾಗಿರುತ್ತದೆ. ಕುಟುಂಬದಲ್ಲಿ ಸುಖಕರ ಜೀವನ ನಡೆಸಬಹುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಗುಡ್ಡದರಂಗವನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ ಆಡಳಿತ ವೈದ್ಯಾಧಿಕಾರಿ ಡಾ. ಗೀತಾಂಜಲಿ, ಆರೋಗ್ಯ ನಿರೀಕ್ಷಣಾಧಿಕಾರಿ ಪ್ರಶಾಂತ್, ಪ್ರಯೋಗಶಾಲಾ ತಂತ್ರಜ್ಞಾಧಿಕಾರಿ ವೆಂಕಟೇಶ್, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಶಿಲ್ಪಾ, ಫಾರ್ಮಸಿ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T